# ಕರಾವಳಿ ತರಂಗಿಣಿ

ಕಡಲ ಕಿನಾರೆಯಿಂದ ಕೆಂಪು ಕೋಟೆಯವರೆಗೆ..

ಕನ್ನಡ ವಾರಪತ್ರಿಕೆ

**ಸುಭಾಷಿತ:**

ತಿನ್ನುವ ಅನ್ನದ ಮೇಲೆ ಅಹಂಕಾರ ಪಟ್ಟರೆ.
ರೋಗ ರುಜಿನದಿಂದ ಬಳಲುತ್ತಾನೆ..
ಹೆಣ್ಣನ್ನು ತಿರಸ್ಕಾರ ಭಾವದಿಂದ ನೋಡಿದರೆ
ಬ್ರಹ್ಮಚಾರಿಯಾಗಿಯೇ ಉಳಿಯುತ್ತಾನೆ..
ಒದಗಿ ಬಂದ ಸಂಪತ್ತನ್ನು ಕಡೆಗಣಿಸಿದರೆ
ದರಿದ್ರನಾಗಿಯೇ ಇರುತ್ತಾನೆ..
ಕಾಯಕದ ಮೇಲೆ ಪ್ರೀತಿ ತೋರದಿದ್ದರೆ
ನಿರುದ್ಯೋಗಿಯಾಗಿಯೇ ಬಾಳುತ್ತಾನೆ..
ಕುಟುಂಬ ಸಂಸಾರದಲ್ಲಿ ಒಲವು ಇಲ್ಲದಿದ್ದರೆ
ಅನಾಥನಾಗಿಯೇ ಉಳಿಯುತ್ತಾನೆ.
**ಭಗವಾನ್ ಶ್ರೀಕೃಷ್ಣ**



PRGI No: KNKAN/25/A2498 www.karavalitharangini.com KARAVALI THARANGINI KANNADA Weekly Dakshina Kannada ದಿನಾಂಕ: 11-09-2026 to 17-09-2026 ಬೆಲೆ:10-00 ಸಂಪುಟ–1 ಸಂಚಿಕೆ–50 ಪುಟಗಳು–6

ನಾಡಿನ ಜನತೆಗೆ
ಗೌರಿ ಗಣೇಶ
ಹಬ್ಬದ
ಹಾರ್ದಿಕ ಶುಭಾಶಯಗಳು



www.karavalitharangini.com
ಕರಾವಳಿ ತರಂಗಿಣಿ
ಮಂಗಳೂರು

ಕ್ಷಣ ಕ್ಷಣದ ಸುದ್ದಿಗಳಿಗಾಗಿ
ಕರಾವಳಿ ತರಂಗಿಣಿ
ಪತ್ರಿಕಾ ಬಳಗದಿಂದ
ಅಂತರ್ಜಾಲ ಮಾಧ್ಯಮ
www.karavalitharangini.com
ಕರಾವಳಿ ತರಂಗಿಣಿ
ಮಂಗಳೂರು



ಆಧುನಿಕತೆಯ ಭರಾಟೆಯಲ್ಲಿ ರಸಾಯನಿಕಗಳ ಬಳಕೆಯಿಂದ ನಮ್ಮ ಆರೋಗ್ಯ ಕ್ಷೀಣಿಸುತ್ತಿದ್ದು, ಅಜ್ಜಿ ಕಾಲದ ಮದ್ದುಗಳಾದ ಗಿಡಮೂಲಿಕೆಗಳತ್ತ ಮರಳುವ ಅನಿವಾರ್ಯತೆ ಇದೆ. ಮನೆಮುಂದಿನ ಕೈತೋಟದಲ್ಲಿ ಬೆಳೆಯುವ ತುಳಸಿ, ಅಮೃತಬಳ್ಳಿ, ತುಂಬೆ, ನೆಲನೆಲ್ಲಿ ಮತ್ತು ಭೃಂಗರಾಜದಂತಹ ಔಷಧೀಯ ಸಸ್ಯಗಳು ಕೇವಲ ಗಿಡಗಳಲ್ಲ, ಬದಲಿಗೆ ನಮ್ಮ ರೋಗನಿರೋಧಕ ಶಕ್ತಿಯ ರಕ್ಷಕ ಕವಚಗಳು. ಪ್ರತಿಯೊಬ್ಬರೂ ಈ ಪ್ರಕೃತಿ ದತ್ತ ಮೂಲಿಕೆಗಳ ಮಹತ್ವವನ್ನು ಅರಿತು, ರಾಸಾಯನಿಕ ಮುಕ್ತ ಜೀವನಶೈಲಿಗಾಗಿ ನಮ್ಮ ಸಾಂಪ್ರದಾಯಿಕ ಗಿಡಮೂಲಿಕೆಗಳನ್ನು ದಿನನಿತ್ಯದ ಬದುಕಿನಲ್ಲಿ ವೈಜ್ಞಾನಿಕವಾಗಿ ಬಳಸಿಕೊಳ್ಳುವ ಮೂಲಕ ಆರೋಗ್ಯಕರ ಭವಿಷ್ಯವನ್ನು ನಿರ್ಮಿಸುವುದು ಅಗತ್ಯ.

## ಖಾತೆ ಖಾಲಿ, ಸಂಭ್ರಮದ ಖರ್ಚು ಭಾರಿ –ಅಶೋಕ್

**ಬೆಂಗಳೂರು:** ಸಾಧನೆಯ ಖಾತೆ ಖಾಲಿ. ಸಂಭ್ರಮದ ಖರ್ಚು ಭಾರಿ. ಯಾವ ಸಾಧನೆಗೆ ಈ ಸಂಭ್ರಮ?. ಇದು ಶತ ದಿನೋತ್ಸವವಲ್ಲ, ಸಾಧನೆಯ ಶೂನ್ಯತೆಯನ್ನು ದೀಪಾಲಂಕಾರದ ಹಿಂದೆ ಮುಚ್ಚುವ ವ್ಯರ್ಥ ಪ್ರದರ್ಶನ ಎಂದು ವಿಪಕ್ಷ ನಾಯಕ ಆರ್.ಅಶೋಕ್ ಅವರು ರಾಜ್ಯ ಸರ್ಕಾರದ ನೂರು ದಿನಗಳ ಕಾರ್ಯಕ್ರಮದ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ. ಈ ಸಂಬಂಧ ಎಕ್ಸ್ ಪೋಸ್ಟ್ ಮಾಡಿರುವ ಅವರು, ಸಾಧನೆಯ ಖಾತೆ ಖಾಲಿ. ಸಂಭ್ರಮದ ಖರ್ಚು ಭಾರಿ. ಯಾವ ಸಾಧನೆಗೆ ಈ ಸಂಭ್ರಮ?. ಯಾವ ಸಾಧನೆಗೆ ಈ ಸಡಗರ? ನಾಚಿಕೆಯಾಗಬೇಕು, ಸಿಎಂ ಡಿ.ಕೆ.ಶಿವಕುಮಾರ್ ಅವರೇ. ಆದರೆ ನಿಮ್ಮ ಭಂಡತನವನ್ನು ಮಾತ್ರ ಮೆಚ್ಚಲೇಬೇಕು. 100 ದಿನಗಳ ಆಡಳಿತಕ್ಕೆ ಬ್ಯಾಂಕ್ವೆಟ್ ಹಾಲ್, ಭರ್ಜರಿ ವೇದಿಕೆ, ವಿದ್ಯುತ್ ದೀಪಾಲಂಕಾರ, ಕೋಟ್ಯಂತರ ರೂಪಾಯಿಗಳ ಪ್ರಚಾರ. ಇಷ್ಟೆಲ್ಲಾ ಸಂಭ್ರಮ, ಸಡಗರ **3ನೇ ಪುಟಕ್ಕೆ**



## ಜನಸಾಮಾನ್ಯರ ಕೈಗೆಟಕ ಬಹುದೇ 100ರ ಕೊಡುಗೆ..?



**ಮಂಗಳೂರು:** ರಾಜ್ಯ ಸರ್ಕಾರ ತನ್ನ ಅಧಿಕಾರದ 100 ದಿನಗಳನ್ನು ಪೂರೈಸುತ್ತಿರುವ ಈ ಸಂದರ್ಭದಲ್ಲಿ, ಸಚಿವ ಸಂಪುಟ ಸಭೆಯು ರಾಜ್ಯದ ಜನತೆಗೆ ಯೋಜನೆಗಳ ಸುರಿಮಳೆಯನ್ನೇ ಹರಿಸಿದೆ. ರೈತರು, ಕಾರ್ಮಿಕರು, ವಸತಿರಹಿತರು, ಯುವ ಜನತೆ ಹಾಗೂ ಆರೋಗ್ಯ ರಕ್ಷಣೆಯನ್ನು ಕೇಂದ್ರವಾಗಿಸಿಕೊಂಡು ಹಲವು ಮಹತ್ವದ ನಿರ್ಧಾರಗಳನ್ನು ಪ್ರಕಟಿಸಲಾಗಿದೆ. ಸರ್ಕಾರ ಘೋಷಿಸಿರುವ ಪ್ರಮುಖ ಕೊಡುಗೆಗಳಲ್ಲಿ, 3 ಎಕರೆಗಿಂತ ಕಡಿಮೆ ಜಮೀನು ಹೊಂದಿರುವ ಬಡ ರೈತರ ಹೊಲಗಳಲ್ಲಿ ಉಚಿತವಾಗಿ ಟ್ರ್ಯಾಕ್ಟರ್ ಉಳುಮೆ ಮಾಡಿಸಿಕೊಡುವ ‘ಮುಖ್ಯಮಂತ್ರಿ ನೇಗಿಲ ಯೋಗಿ’ ಯೋಜನೆಯು **3ನೇ ಪುಟಕ್ಕೆ**

## ಡಿಸಿ ಮನ್ನಾ ಭೂಮಿ: ಸ್ವಾಭಿಮಾನದ ಕೃಷಿ ಹಕ್ಕಿಗಾಗಿ ನಿರೀಕ್ಷೆ

**ಮಂಗಳೂರು:** ಬ್ರಿಟಿಷರ ಆಡಳಿತಾವಧಿಯಲ್ಲಿ ದಮನಿತರು ಮತ್ತು ಶೋಷಿತರ ಸಾಮಾಜಿಕ ಹಾಗೂ ಆರ್ಥಿಕ ಸಬಲೀಕರಣಕ್ಕಾಗಿ ಮೀಸಲಿಡಲಾದ ‘ಡಿಸಿ ಮನ್ನಾ’ ಭೂಮಿಯ ಹಂಚಿಕೆ ವಿವಾದವು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಮತ್ತೆ ರಾಜಕೀಯ ಹಾಗೂ ಸಾಮಾಜಿಕ ಸಂಘರ್ಷದ ಕೇಂದ್ರಬಿಂದುವಾಗಿ ಮಾರ್ಪಟ್ಟಿದೆ. ಶತಮಾನಗಳ ಇತಿಹಾಸವಿರುವ ಈ ಭೂ ಹಕ್ಕಿನ ಹೋರಾಟಕ್ಕೆ ಸೆಪ್ಟೆಂಬರ್ 18ರಂದು ಮಂಗಳೂರಿನಲ್ಲಿ ನಡೆಯಲಿರುವ ರಾಜ್ಯ ಸಚಿವ ಸಂಪುಟ ಸಭೆಯು ಈ ಐತಿಹಾಸಿಕ ಅನ್ಯಾಯಕ್ಕೆ ಪರಿಹಾರ **3ನೇ ಪುಟಕ್ಕೆ**








# ಸಂಪ್ರದಾಯ

## ವಿಲಾಸಿನಿ ನಾಟ್ಯಮ್



# ಸಂಪಾದಕೀಯ

ಕರಾವಳಿ ತರಂಗಿಣಿ

## ಗುರುವಿನ ಗುಲಾಮನಾಗುವ ತನಕ...

– ಲಲಿತಶ್ರೀ ಪ್ರೀತಮ್ ರೈ



ಗುರು ಬ್ರಹ್ಮ ಗುರು ವಿಷ್ಣು ಗುರುದೇವೋ ಮಹೇಶ್ವರ, ಗುರು ಸಾಕ್ಷಾತ್ ಪರಬ್ರಹ್ಮ ತಸ್ಮೈ ಶ್ರೀ ಗುರುವೇ ನಮಃ ಎಂದು ಗುರುವನ್ನು ಪೂಜಿಸುವ ಸಂಸ್ಕೃತಿ ನಮ್ಮದು. ವೇದ, ಉಪನಿಷತ್‌ಗಳಲ್ಲಿಯೂ ಗುರುವಿಗೆ ವಿಶೇಷ ಸ್ಥಾನವಿದೆ. ಮಾತೃದೇವೋ, ಪಿತೃದೇವೋ, ಆಚಾರ್ಯ ದೇವೋ ಭವ ಎಂದು ತಂದೆ ತಾಯಿಯ ನಂತರದ ಸ್ಥಾನ ಗುರುವಿನದು ಎಂದು ನಂಬಿಕೊಂಡು, ಪೂಜಿಸುತ್ತಾ ಬಂದ ದೇಶ ನಮ್ಮದು. ಸರಿಯಾದ ದಾರಿ ತೋರುವ, ಬುದ್ಧಿಯನ್ನು ಉಪಯೋಗಿಸಿ ಸಮಾಜಕ್ಕೆ ಒಳಿತು ಮಾಡುವಂತೆ ಮಾರ್ಗದರ್ಶನ ಮಾಡುವ ಶಕ್ತಿಯುರುವುದು ಕೇವಲ ಗುರುವಿನಲ್ಲಿ ಮಾತ್ರ. ಪುರಾಣದ ಕತೆಗಳನ್ನು ನೋಡಿದರೆ ನಮ್ಮ ಹಿರಿಯರು ಗುರುಗಳಿಗೆ ಎಂತಹ ಮಹತ್ವವನ್ನು ನೀಡಿದ್ದರು ಎಂದು ತಿಳಿಯುತ್ತದೆ. ಶ್ರೀರಾಮಚಂದ್ರ ಮರ್ಯಾದಾ ಪುರುಷೋತ್ತಮ ಎಂದು ಕರೆಸಿಕೊಳ್ಳಲು ಅವನಿಗೆ ಜೀವನದ ವಿವಿಧ ಹಂತಗಳಲ್ಲಿ ದೊರೆತ ಗುರುಗಳೇ ಕಾರಣ ಎನ್ನಬಹುದು. ಅವರ ಮಾರ್ಗದರ್ಶನವೇ ಅವನನ್ನು ಆದರ್ಶ ಪುರುಷನನ್ನಾಗಿ ರೂಪಿಸಿದ್ದು. ಮಹಾಭಾರತದಲ್ಲಿ ಅರ್ಜುನ ಒಬ್ಬ ಉತ್ತಮ ಬಿಲ್ವಿದ್ಯಾ ಪ್ರವೀಣನಾಗಲು ಕೂಡ ದ್ರೋಣಾಚಾರ್ಯರಂತಹ ಗುರುಗಳೇ ಕಾರಣ. ನಮ್ಮ ಇತಿಹಾಸದ ಪ್ರಸಿದ್ಧ ದೊರೆಗಳಾದ ಹಕ್ಕ ಬುಕ್ಕರು, ಶತ್ರುಗಳ ದಾಳಿಯಿಂದ ಕ್ಷೀಣಿಸಿದ್ದ ವಿಜಯನಗರ ಸಾಮ್ರಾಜ್ಯವನ್ನು ಹಿಂಪಡೆಯಲು ವಿದ್ಯಾರಣ್ಯರಂತಹ ಗುರುಗಳ ಮಾರ್ಗದರ್ಶನವೇ ಕಾರಣ. ಶಿವಾಜಿ ಮಹಾರಾಜರು ಸೋತು ಬಸವಳಿದು ಕಂಗೆಟ್ಟು ಕುಳಿತಿದ್ದಾಗ, ಸಮರ್ಥ ರಾಮದಾಸರಂತಹ ಗುರುಗಳು ಅವನಿಗೆ ಅನೇಕ ಉಪದೇಶಗಳ ಮೂಲಕ ಆತ್ಮವಿಶ್ವಾಸ ತುಂಬಿದ್ದನ್ನು ನಾವು ಓದಿದ್ದೇವೆ. ಇದರ ನಂತರ ಶಿವಾಜಿ ಮಹಾರಾಜರು ಪುನಃ ತಮ್ಮ ಸಾಮ್ರಾಜ್ಯವನ್ನು ಪಡೆಯುವಲ್ಲಿ ಯಶಸ್ವಿಯಾಗುತ್ತಾರೆ. ಚಂದ್ರಗುಪ್ತ ಮೌರ್ಯನ ಗುರು ಚಾಣಾಕ್ಯರ ಕತೆ... ಹೀಗೆ ಮುಂದುವರಿಯುತ್ತದೆ ನಮ್ಮ ಪುರಾಣ, ಇತಿಹಾಸಗಳಲ್ಲಿ ದೊರಕುವ ಮಹಾನ್ ಪುರುಷರುಗಳ ಹಿಂದೆ ಇದ್ದ ಗುರುಗಳ ಪಟ್ಟಿ. ...

# ವೈದ್ಯೋನಾರಾಯಣೋ ಹರಿಃ

## ಬೆಂಡೆ ಕಾಯಿ



# ಕ್ಷೇತ್ರದರ್ಶನ



ಕಂಚಿ ಕಾಮಾಕ್ಷಿ

# ಕಾಮಧೇನು

## ಪ್ರಕೃತಿಯೇ ನಮಗೆ ದಾರಿ ದೀಪ


@ ಕೃಷ್ಣಾಮೃತ



# ಕಲ್ಪವೃಕ್ಷ

@ಪ್ರೀತಂ ರೈ ಇ

## ಲೆ. ಕ. ಸತೀಶ್ ಚಂದ್ರ ಜೋಶಿ



# ಪಾರಿಜಾತ

ಕರಾವಳಿ ತರಂಗಿಣಿ



## ಜನಸಾಮಾನ್ಯರ ಕೈಗೆಟಕಬಹುದೇ 100ರ ಕೊಡುಗೆ..?

ಒಂದನೇ ಪುಟದಿಂದ......

ಪ್ರಮುಖವಾದದ್ದು. ಮೊದಲ ಹಂತದಲ್ಲಿ 31 ತಾಲೂಕುಗಳಲ್ಲಿ 152 ಕೋಟಿ ರೂಪಾಯಿ ವೆಚ್ಚದಲ್ಲಿ ಇದು ಜಾರಿಯಾಗಲಿದ್ದು, ಒಟ್ಟಾರೆ 59 ಲಕ್ಷರೈತರಿಗೆ ನೆರವಾಗುವ ನಿರೀಕ್ಷೆಯಿದೆ. ವಸತಿ ರಹಿತರಿಗಾಗಿ 15 ಲಕ್ಷ ನಿವೇಶನ ಹಂಚಿಕೆ, 'ಶ್ರಮಿಕ್ ನಿವಾಸ್' ಅಡಿಯಲ್ಲಿ 10,000 ಮನೆಗಳು ಹಾಗೂ 10,000 ಟ್ಯಾಕ್ಸಿ ವಿತರಣೆ ಯೋಜನೆಗಳನ್ನೂ ಘೋಷಿಸಲಾಗಿದೆ. ಕೈಗಾರಿಕಾ ಕ್ಷೇತ್ರದಲ್ಲಿ 2026-31ರ 'ಕರ್ನಾಟಕ ಏರೋಸ್ಪೇಸ್ ನೀತಿ' ಮತ್ತು 'ನೂತನ ಜವಳಿ ನೀತಿ'ಯ ಮೂಲಕ 60,000 ಕೋಟಿ ಹೂಡಿಕೆ ಹಾಗೂ 60,000 ಉದ್ಯೋಗ ಸೃಷ್ಟಿಯ ಗುರಿ ಹೊಂದಲಾಗಿದೆ. ಹಿಂದುಳಿದ 10 ಜಿಲ್ಲೆಗಳಲ್ಲಿ ಉದ್ಯೋಗ ಸೃಷ್ಟಿಸುವ ಕಂಪನಿಗಳಿಗೆ ಮಾಸಿಕ 2,500 ರೂಪಾಯಿ ಪ್ರೋತ್ಸಾಹಧನ ನೀಡಲು 300 ಕೋಟಿ ರೂಪಾಯಿ ಕಾಯ್ದಿರಿಸಲಾಗಿದೆ. ಚಿಕ್ಕಬಳ್ಳಾಪುರದಲ್ಲಿ ದೇಶದ ಮೊದಲ 'ಡ್ರೋನ್ ಪರೀಕ್ಷಾ ಕೇಂದ್ರ', ಬೆಂಗಳೂರು IIIT ಯಲ್ಲಿ 'AI ಹಬ್', ಶಕ್ತಿ ಯೋಜನೆಗೆ 'ಸ್ಮಾರ್ಟ್‌ಕಾರ್ಡ್' ಹಾಗೂ ಆರೋಗ್ಯ ಕ್ಷೇತ್ರದಲ್ಲಿ 'ಟೆಲಿ-ICU' ಸೌಲಭ್ಯಗಳನ್ನು ಘೋಷಿಸಲಾಗಿದ್ದು, ಉನ್ನತ ಶಿಕ್ಷಣದಲ್ಲಿ ವಿದ್ಯಾರ್ಥಿ ಸಂಘಗಳ ಚುನಾವಣೆಗೆ ಹಸಿರು ನಿಶಾನೆ ತೋರಲಾಗಿದೆ. ಸಣ್ಣ ರೈತರಿಗೆ ಉಳುಮೆ ವೆಚ್ಚವೇ ದೊಡ್ಡ ಹೊರೆಯಾಗಿದ್ದು, ಉಚಿತ ಟ್ರ್ಯಾಕ್ಟರ್ ಉಳುಮೆ ರೈತರ ಜೇಬಿಗೆ ನೇರ ಆಸರೆಯಾಗಲಿದೆ. ಉತ್ತರ ಕರ್ನಾಟಕ ಸೇರಿದಂತೆ ಹಿಂದುಳಿದ 10 ಜಿಲ್ಲೆಗಳಿಗೆ ವಿಶೇಷ ಪ್ರೋತ್ಸಾಹಧನ ನೀಡುವುದು ಪ್ರಾದೇಶಿಕ ಅಸಮತೋಲನ ಕಮ್ಮಿ ಮಾಡಲು ನೆರವಾಗುತ್ತದೆ. ಡ್ರೋನ್ ಟೆಸ್ಟಿಂಗ್, AI ಹಬ್ ಹಾಗೂ ಗ್ರಾಮೀಣ ಪ್ರದೇಶಗಳಿಗೆ ಟೆಲಿ-ICU ಸೌಲಭ್ಯಗಳು ರಾಜ್ಯದ ಆರೋಗ್ಯ ಮತ್ತು ತಾಂತ್ರಿಕ ಮೂಲಸೌಕರ್ಯವನ್ನು ಮುಂದಿನ ಹಂತಕ್ಕೆಕೊಂಡೊಯ್ಯಲಿವೆ. ವಸತಿ ರಹಿತರಿಗೆ ಆದ್ಯತೆ ಮೇರೆಗೆ ಸೈಟು ಹಾಗೂ ಕಾರ್ಮಿಕರಿಗೆ ನಿವಾಸ ನೀಡುವುದು ತಳಮಟ್ಟದ ಜನರಿಗೆ ಆಸರೆಯಾಗಲಿದೆ. ಆದರೆ ಸರ್ಕಾರದ ಬೊಕ್ಕಸದ ಮೇಲೆ ಈಗಾಗಲೇ ಗ್ಯಾರಂಟಿ ಯೋಜನೆಗಳ ಭಾರವಿರುವಾಗ, ಈ ಹೊಸ ಯೋಜನೆಗಳಿಗೆ ಅಗತ್ಯವಿರುವ ಸಂಪನ್ಮೂಲ ಕ್ರೋಢೀಕರಣದೊಡ್ಡ ಸವಾಲಾಗಿದೆ.

## ಡಿಸಿ ಮನ್ನಾ ಭೂಮಿ: ಸ್ವಾಭಿಮಾನದ ಕೃಷಿ ಹಕ್ಕಿಗಾಗಿ ನಿರೀಕ್ಷೆ

ಒಂದನೇ ಪುಟದಿಂದ......

ನೀಡಲಿದೆಯೇ ಎಂಬ ನಿರೀಕ್ಷೆ ಗರಿಗೆದರಿದೆ. ಮದ್ರಾಸ್ ಪ್ರಾಂತ್ಯದಲ್ಲಿ 1892ರಲ್ಲಿ ಅಂದಿನ ಬ್ರಿಟಿಷ್ ಕಲೆಕ್ಟರ್ ಜೇಮ್ಸ್ ಟ್ರೆಮನ್ ಹೀರೇ ಅವರ ವರದಿಯಆಧಾರದ ಮೇಲೆ ದಲಿತರಿಗೆ ಕೃಷಿ ಮತ್ತು ವಸತಿಗಾಗಿ ಭೂಮಿಯನ್ನು ಮಂಜೂರು ಮಾಡುವ 'ಡಿಸಿ ಮನ್ನಾ' ಪದ್ಧತಿ ಜಾರಿಗೆ ಬಂದಿತು. ಸ್ವಾತಂತ್ರ್ಯಾ ನಂತರವೂ ಮುಂದುವರಿದ ಈ ಕಾಯ್ದೆಯಡಿ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಒಟ್ಟು 8,509.79 ಎಕರೆ ಅಂದರೆ ಅಂದಾಜು 8,800 ಎಕರೆ ಭೂಮಿಯನ್ನು ಗುರುತಿಸಲಾಗಿತ್ತು. ಸರ್ಕಾರಿ ಅಂಕಿ-ಅಂಶಗಳ ಪ್ರಕಾರ, 1997ರವರೆಗೆ ಅರ್ಹ ಫಲಾನುಭವಿಗಳಿಗೆ ತಲಾ 1 ರಿಂದ 2 ಎಕರೆಯಂತೆ ಸುಮಾರು 7,366 ಎಕರೆ ಜಮೀನನ್ನು ಹಂಚಿಕೆ ಮಾಡಲಾಗಿದೆ. ಆದರೆ, ತಲೆಮಾರುಗಳಿಂದ ಭೂಮಿಗಾಗಿ ಕಾಯುತ್ತಿರುವ ಪರಿಶಿಷ್ಟ ಸಮುದಾಯಗಳ ಬರೋಬ್ಬರಿ 5,590 ಅರ್ಜಿಗಳು ಇಂದಿಗೂ ವಿಲೇವಾರಿಯಾಗದೆ ಕಂದಾಯ ಕಚೇರಿಗಳಲ್ಲಿ ಧೂಳು ಹಿಡಿಯುತ್ತಿವೆ. ಜಿಲ್ಲೆಯಲ್ಲಿ ಉಳಿದಿರುವ ಜಮೀನಿನಲ್ಲಿ ಪ್ರತಿಯೊಬ್ಬರಿಗೂ ಕೃಷಿ ಮಾಡಲು ಭೂಮಿ ನೀಡಲು ಸಾಧ್ಯವಿಲ್ಲ ಎಂಬುದು ಜಿಲ್ಲಾಡಳಿತದ ಸ್ಪಷ್ಟ ನಿಲುವಾಗಿದೆ. ದಕ್ಷಿಣಕನ್ನಡ ಜಿಲ್ಲೆಯಲ್ಲಿ ಕಂದಾಯ ಭೂಮಿಯಾಗಿಉಳಿದುಕೊಂಡಿದ್ದು, ಕೃಷಿ ಭೂಮಿಯ ಬದಲಿಗೆ ನಗರ ವ್ಯಾಪ್ತಿಯಲ್ಲಿ 30/40 ಅಡಿ ಹಾಗೂ ಗ್ರಾಮಾಂತರ ಪ್ರದೇಶದಲ್ಲಿ 60/40 ಅಡಿ ಅಳತೆಯ ಮನೆ ನಿವೇಶನಗಳನ್ನು ನೀಡುವಂತೆ ಸರ್ಕಾರದಿಂದ ಈಗಾಗಲೇ ಸುತ್ತೋಲೆ ಹೊರಡಿಸಲಾಗಿದೆ.

## ಖಾತೆ ಖಾಲಿ, ಸಂಭ್ರಮದ ಖರ್ಚು ಭಾರಿ –ಅಶೋಕ್

ಒಂದನೇ ಪುಟದಿಂದ......

ಯಾವ ಪುರುಷಾರ್ಥಕ್ಕೆ? ಯಾವ ಸಾಧನೆಗೆ? ಎಂದು ಟೀಕಾ ಪ್ರಹಾರ ನಡೆಸಿದ್ದಾರೆ. ಜನರಿಗೆ ತೋರಿಸಲು ಒಂದೇ ಒಂದು ದೊಡ್ಡ ಸಾಧನೆಯೂ ಇಲ್ಲದಿದ್ದಾಗ, ವೈಫಲ್ಯಗಳನ್ನೇ ಸಾಧನೆಗಳೆಂದು ಬಿಂಬಿಸಲು ಈ ಸಂಭ್ರಮವೇ? ರಾಜ್ಯದ ವಾಸ್ತವ ಚಿತ್ರಣ, ಪ್ರತಿಯೊಂದು ವರ್ಗಕ್ಕೂ ದ್ರೋಹ. ಮಹಿಳೆಯರು ಗೃಹಲಕ್ಷ್ಮಿ ಹಣಕ್ಕಾಗಿ ತಿಂಗಳುಗಟ್ಟಲೆ ಕಾಯುವ, ಕಚೇರಿ ಬ್ಯಾಂಕ್‌ಗಳ ಬಾಗಿಲು ತಟ್ಟುವ ಪರಿಸ್ಥಿತಿ. ಯುವ ಜನತೆ ಉದ್ಯೋಗ ಸಿಗಬೇಕಾದರೆ ಅರ್ಹತೆಗಿಂತ ಲಂಚವೇ ಮುಖ್ಯವೆನ್ನುವಂತಹ ಜಾಲಗೆಡಿತನದ ಆಡಳಿತ. ವಿದ್ಯಾರ್ಥಿಗಳಿಗೆ ಸಮಯಕ್ಕೆ ಸಿಗದ ಪಠ್ಯಪುಸ್ತಕಗಳು. ತಲೆಯ ಮೇಲೆ ಸೋರುವ, ಕುಸಿಯುತ್ತಿರುವ ಶಾಲಾ ಕೊಠಡಿಗಳು. ಒಂದೇ ದಿನಕ್ಕೆ ಹರಿದು ಹೋಗುವ ಕಳಪೆ ಶೂ-ಸಾಕ್ಸ್!. ಬೆಳೆನಷ್ಟದಿಂದ ಕಂಗಾಲಾದ ಅನ್ನದಾತನಿಗೆ ಬರ ಪರಿಹಾರವೂ ಇಲ್ಲ, ಸರ್ಕಾರದ ಸ್ಪಂದನೆಯೂ ಇಲ್ಲ. ವೃದ್ಧರು, ವಿಧವೆಯರು, ಅಂಗವಿಕಲರಿಗೆ ಆಸರೆಯಾಗಿದ್ದ ಪಿಂಚಣಿಗೂ ಕತ್ತರಿ. ದಿನಬಳಕೆಯ ವಸ್ತುಗಳ ಬೆಲೆ ಏರಿಕೆ, ತೆರಿಗೆಗಳ ಹೊರೆಯಿಂದ ಶ್ರೀಸಾಮಾನ್ಯನ ಬದುಕೇ ದುಬಾರಿ. ಬೆಂಗಳೂರು ರಸ್ತೆಯಲ್ಲಿಗುಂಡಿ, ರಸ್ತೆಯಂಚಿನಲ್ಲಿಕಸದ ರಾಶಿ ಹೇಳಿದ್ದು 'ಬ್ರಾಂಡ್ ಬೆಂಗಳೂರು', ಕೊಟ್ಟಿದ್ದು 'ಬ್ರೋಕನ್ ಬೆಂಗಳೂರು'. ಇದೇನಾ 100 ದಿನಗಳ ಸಾಧನೆ ಎಂದು ಪ್ರಶ್ನಿಸಿದ್ದಾರೆ. ಜನರ ಬದುಕು ಕತ್ತಲಲ್ಲಿ, ಬ್ಯಾಂಕ್ವೆಟ್ ಹಾಲ್‌ನಲ್ಲಿ ಮಾತ್ರ ದೀಪಾಲಂಕಾರ. ರಾಜ್ಯಕ್ಕೆ ಬೇಕಾಗಿದ್ದು ಅಭಿವೃದ್ಧಿಯ ಬೆಳಕು. ನೀವು ಕೊಟ್ಟಿದ್ದು ವೇದಿಕೆಯ ಥಳಕು ಎಂದು ಆರ್.ಅಶೋಕ್ ಟೀಕಿಸಿದ್ದಾರೆ.

## ಅಂಬಿಗರ ಚೌಡಯ್ಯ ನಿಗಮದ ಯೋಜನೆಗಳಿಗೆ ಅರ್ಜಿ ಆಹ್ವಾನ

ಮಂಗಳೂರು – ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮದ ವತಿಯಿಂದ ಪ್ರವರ್ಗ-1ರ 6(a) ಯಿಂದ 6 (ak) ವರೆಗೆ ಬರುವ ಬೆಸ್ತ, ಅಂಬಿಗ/ ಅಂಬಿ, ಗಂಗಾಮತ, ಕಬ್ಬಲಿಗ, ಕೋಲಿ, ಮತ್ತು ಇದರ ಉಪಜಾತಿಗಳ ಅಭಿವೃದ್ಧಿಗಾಗಿ 2026-27ನೇ ಸಾಲಿನಲ್ಲಿ ಅನಷ್ಠಾನಗೊಳಿಸುತ್ತಿರುವ ವಿವಿಧ ಸೌಲಭ್ಯ ಪಡೆಯಲು ಬಯಸುವವರಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಸೆಪ್ಟೆಂಬರ್ 30 ಕೊನೆಯ ದಿನ. ಹೆಚ್ಚಿನ ಮಾಹಿತಿಗಾಗಿ ನಿಗಮದ ವೆಬ್‌ಸೈಟ್ http://ambigaradevelopment.karnataka.gov.in ಅಥವಾ ನಿಗಮದ ದೂರವಾಣಿ ಸಂಖ್ಯೆ 080-22864099 /0824-2456544 ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

## ಅತಿಥಿ ಶಿಕ್ಷಕರ ಹುದ್ದೆ : ಅರ್ಜಿ ಆಹ್ವಾನ

ಮಂಗಳೂರು : ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ನಗರದ ಕುದ್ರೋಳಿ ಮೌಲಾನಾ ಆಜಾದ್ ಮಾದರಿ ಶಾಲೆಗೆ ದೈಹಿಕ ಶಿಕ್ಷಣ ಮತ್ತು ಕನ್ನಡ ವಿಷಯಕ್ಕೆ ಅತಿಥಿ ಶಿಕ್ಷಕರ ಹುದ್ದೆಗೆ ಅರ್ಜಿ ಆಹ್ವಾನಿಸಲಾಗಿದೆ. ವೇತನ ರೂ.12500 ನೀಡಲಾಗುತ್ತದೆ. ಹೆಚ್ಚಿನ ಮಾಹಿತಿಗೆ ಶಾಲೆಯ ಮುಖ್ಯ ಶಿಕ್ಷಕ (ದೂರವಾಣಿ ಸಂಖ್ಯೆ: 8762124074) ರನ್ನು ಸಂಪರ್ಕಿಸಬಹು ದು ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸವಿತಾ ಸಮಾಜದ ಅಭಿವೃದ್ಧಿ ನಿಗಮದ ಯೋಜನೆಗಳಿಗೆ ಅರ್ಜಿ ಆಹ್ವಾನ

ಶಿವಮೊಗ್ಗ : ಕರ್ನಾಟಕ ಸವಿತಾ ಸಮಾಜದ ಅಭಿವೃದ್ಧಿ ನಿಗಮದಿಂದ 2026-27ನೇ ಸಾಲಿಗೆ ಅರ್ಹ ಅಭ್ಯರ್ಥಿಗಳಿಂದ ವಿವಿಧ ಯೋಜನೆಗಳಡಿ ಸೌಲಭ್ಯ ನೀಡಲು ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ನಿಗಮದ ವೆಬ್‌ಸೈಟ್ www.kssd.karnataka.gov.in, ದೂ.ಸಂ.:080-22374832/8050770004/8050770005ಸಂಪರ್ಕಿಸಬಹುದು.

## ಮಹಿಳಾ ವೈದ್ಯರ ನೇಮಕಾತಿಗೆ ಅರ್ಜಿ ಆಹ್ವಾನ

ಶಿವಮೊಗ್ಗ : ಶಂಕರಘಟ್ಟದ ಕುವೆಂಪು ವಿಶ್ವವಿದ್ಯಾಲಯದ ಆರೋಗ್ಯ ಕೇಂದ್ರದಲ್ಲಿ ಖಾಲಿ ಇರುವ 01 ಮಹಿಳಾ ವೈದ್ಯರ ಹುದ್ದೆಯನ್ನು ತಾತ್ಕಾಲಿಕ/ಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಜಿ ನಮೂನೆ, ಅರ್ಹತೆಗಳು ಹಾಗೂ ಹೆಚ್ಚಿನ ವಿವರಗಳಿಗಾಗಿ ವಿಶ್ವವಿದ್ಯಾಲಯದ ಅಧಿಕೃತ ವೆಬ್‌ಸೈಟ್ www.kuvempu.ac.inಗೆ ಭೇಟಿ ನೀಡಬಹುದು ಎಂದು ವಿಶ್ವವಿದ್ಯಾಲಯದ ಕುಲಸಚಿವರು ತಿಳಿಸಿದ್ದಾರೆ.

## ಕಾಡುಗೊಲ್ಲ ಅಭಿವೃದ್ಧಿ ನಿಗಮದಿಂದ ಅರ್ಜಿ ಆಹ್ವಾನ

ಮಡಿಕೇರಿ : ಪ್ರಸಕ್ತ(2026-27) ಸಾಲಿಗೆ ಕರ್ನಾಟಕ ರಾಜ್ಯ ಕಾಡುಗೊಲ್ಲ ಅಭಿವೃದ್ಧಿ ನಿಗಮದ ವಿವಿಧ ಯೋಜನೆಗಳಲ್ಲಿ ಸೌಲಭ್ಯ ಪಡೆಯಲು ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗೆ ನಿಗಮದ ನಿಗಮದ ಕೇಂದ್ರ ಕಚೇರಿಯ ದೂರವಾಣಿ ಸಂಖ್ಯೆ 080-22374848/7899899039 ಸಂಪರ್ಕಿಸಬಹುದು.

## ವಿಶ್ವಕರ್ಮಅಭಿವೃದ್ಧಿ ನಿಗಮದಿಂದ ಅರ್ಜಿ ಆಹ್ವಾನ

ಮಡಿಕೇರಿ : ಕರ್ನಾಟಕ ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿ ನಿಗಮದಿಂದ 2026-27ನೇ ಸಾಲಿನಲ್ಲಿ ವಿವಿಧ ಯೋಜನೆ ಅನುಷ್ಠಾನಗೊಳಿಸಲು ಹಾಗೂ ಈ ಯೋಜನೆಗಳಡಿ ಸಹಾಯಧನ/ ಸಾಲ-ಸೌಲಭ್ಯ ಪಡೆಯಲು ಇಚ್ಛಿಸುವವರು ಕಡ್ಡಾಯವಾಗಿ ಆನ್‌ಲೈನ್ ಮೂಲಕ ಸೇವಾಸಿಂಧು ಪೋರ್ಟಲ್‌ನಲ್ಲಿ ಅರ್ಜಿ ಸಲ್ಲಿಸಬೇಕಿದೆ. ಅರ್ಜಿ ಸಲ್ಲಿಸಲು ಸೆಪ್ಟೆಂಬರ್ 30 ಕೊನೆ ದಿನವಾಗಿದೆ. ಹೆಚ್ಚಿನ ಮಾಹಿತಿಗೆ ನಿಗಮದ ವೆಬ್‌ಸೈಟ್ https://kvcdcl.karnataka.gov.in ರಲ್ಲಿ ಅಥವಾ ನಿಗಮದ ಕೇಂದ್ರ ಕಚೇರಿಯ ದೂ.ಸಂ. 080-22374848/7899899039 ಯಿಂದ ಪಡೆಯಬಹುದಾಗಿದೆ.

## ಗಲ್ಫ್ ಮೆಡಿಕಲ್ ಯುನಿವರ್ಸಿಟಿಯಲ್ಲಿ 2026-2027ರ ಶೈಕ್ಷಣಿಕ ಸಾಲಿಗೆ ಚಾಲನೆ



ಯುಎಇ : ಯುಎಇಯ ಪ್ರಮುಖ ವೈದ್ಯಕೀಯ ಸಂಸ್ಥೆಯಾದ ಗಲ್ಫ್ ಮೆಡಿಕಲ್ ಯುನಿವರ್ಸಿಟಿ (ಜಿಎಂಯು) ತನ್ನ 2026-2027ರ ನೂತನ ಶೈಕ್ಷಣಿಕ ವರ್ಷಕ್ಕೆ ಅಧಿಕೃತವಾಗಿ ಚಾಲನೆ ನೀಡಿದೆ. ಆರೋಗ್ಯ ಶಿಕ್ಷಣ, ಸಂಶೋಧನೆ ಮತ್ತು ನಾವೀನ್ಯತೆಯಲ್ಲಿ ಶ್ರೇಷ್ಠತೆಯನ್ನು ಕಾಯ್ದುಕೊಳ್ಳುವ ಗುರಿಯೊಂದಿಗೆ ವಿಶ್ವವಿದ್ಯಾಲಯವು ಹೊಸ ಹಾಗೂ ಹಳೆಯ ವಿದ್ಯಾರ್ಥಿಗಳನ್ನು ಸಾಂಪ್ರದಾಯಿಕವಾಗಿ ಕ್ಯಾಂಪಸ್‌ಗೆ ಬರಮಾಡಿಕೊಂಡಿದೆ. ಈ ಹೊಸ ಶೈಕ್ಷಣಿಕ ವರ್ಷದಲ್ಲಿ ಆರೋಗ್ಯ ವಿಜ್ಞಾನ ಕೋರ್ಸ್‌ಗಳಿಗೆ ವಿದ್ಯಾರ್ಥಿಗಳಿಂದ ಭಾರಿ ಬೇಡಿಕೆ ಕಂಡುಬಂದಿದೆ. ಈ ಶೈಕ್ಷಣಿಕ ವರ್ಷಾರಂಭದ ಅಂಗವಾಗಿ ತುಂಬೇ ಗ್ರೂಪ್‌ನ ಸಂಸ್ಥಾಪಕ ಅಧ್ಯಕ್ಷ ಡಾ. ತುಂಬೇ ಮೊಹಿದ್ದೀನ್ ಮತ್ತು ವಿಶ್ವವಿದ್ಯಾಲಯದ ಉಪಕುಲಪತಿಗಳು ವಿವಿಧ ಕಾಲೇಜುಗಳ ಡೀನ್‌ಗಳು ಹಾಗೂ ಮುಖ್ಯಸ್ಥರೊಂದಿಗೆ ಸಮಾಲೋಚನೆ ನಡೆಸಿ, ಮುಂಬರುವ ವರ್ಷದ ಶೈಕ್ಷಣಿಕ ಆದ್ಯತೆಗಳ ಕುರಿತು ಚರ್ಚಿಸಿದರು.

## ಬಿಷಪ್ ನೇತೃತ್ವದಲ್ಲಿ ಮೊಂತಿ ಹಬ್ಬದ ಸಂಭ್ರಮ



ಮಂಗಳೂರು : ಕನ್ಯಾಮರಿಯಮ್ಮನವರ ಜನನ ಹಬ್ಬವನ್ನು ('ಮೊಂತಿ ಫೆಸ್ಟ್') ಜೆಪ್ಪುವಿನ ಸಂತ ಅಂತೋನಿ ಆಶ್ರಮದಲ್ಲಿ ಸಾಂಪ್ರದಾಯಿಕ ಸಡಗರ ಹಾಗೂ ಭಕ್ತಿಯಿಂದ ಆಚರಿಸಲಾಯಿತು. ಮಂಗಳೂರು ಧರ್ಮಪ್ರಾಂತ್ಯದ ಧರ್ಮಾಧ್ಯಕ್ಷರಾದ ಅತಿ ವಂದನೀಯ ಡಾ. ಪೀಟರ್ ಪಾಲ್ ಸಲ್ಡಾನ್ಹಾ ಅವರು ಹಬ್ಬದ ವಿಶೇಷ ಬಲಿಪೂಜೆಯ ನೇತೃತ್ವ ವಹಿಸಿದ್ದರು. ಬಲಿಪೂಜೆಯ ಸಂದರ್ಭದಲ್ಲಿ ನೆರೆದಿದ್ದ ಭಕ್ತಾದಿಗಳು ಹಾಗೂ ಆಶ್ರಮದ ನಿವಾಸಿಗಳನ್ನು ಉದ್ದೇಶಿಸಿ ಪ್ರವಚನ ನೀಡಿದ ಬಿಷಪ್ ಸಲ್ಡಾನ್ಹಾ ಅವರು, ಕನ್ಯಾಮರಿಯಮ್ಮನವರ ಸದ್ಗುಣಗಳನ್ನು ಸ್ಮರಿಸಿದರು. ಈ ಹಬ್ಬದ ಸಾಂಸ್ಕೃತಿಕ ಮತ್ತು ಕೌಟುಂಬಿಕ ಪ್ರಾಮುಖ್ಯತೆಯನ್ನು ಒತ್ತಿ ಹೇಳಿದ ಅವರು, "ಮೊಂತಿ ಫೆಸ್ಟ್ ಹೆಣ್ಣು ಮಗುವನ್ನು ಗೌರವಿಸುವ ಮತ್ತು ಭೂಮಿಯ ಸಮೃದ್ಧ ಫಸಲನ್ನು ಆಚರಿಸುವ ವಿಶಿಷ್ಟ ಹಬ್ಬವಾಗಿದೆ. ಇದು ಮೂಲತಃ ಕೌಟುಂಬಿಕ ಹಬ್ಬವಾಗಿದ್ದು, ಕೃತಜ್ಞತೆಯಿಂದ ಒಗ್ಗೂಡಲು ಮತ್ತು ಮಾತೆ ಮರಿಯಮ್ಮನವರ ಪ್ರೀತಿ ಹಾಗೂ ವಿನಯದ ಬೆಳಕಿನಲ್ಲಿ ನಮ್ಮ ಕೌಟುಂಬಿಕ ಬಾಂಧವ್ಯಗಳನ್ನು ನವೀಕರಿಸಲು ನಮ್ಮನ್ನು ಕರೆಯುತ್ತದೆ," ಎಂದು ತಿಳಿಸಿದರು.

## ವಿಜೃಂಭಣೆಯಿಂದ ನಡೆಯಲಿದೆ 20ನೇ ವರ್ಷದ ಬಂಟ್ಸ್ ಹಾಸ್ಟೆಲ್ ಗಣೇಶೋತ್ಸವ




20ನೇ ವರ್ಷದ ಸಾರ್ವಜನಿಕ ಶ್ರೀ ಗಣೇಶೋತ್ಸವ ಅತ್ಯಂತ ವಿಜೃಂಭಣೆಯಿಂದ ಜರುಗಲಿದೆ ಎಂದು ಶ್ರೀ ಸಿದ್ಧಿವಿನಾಯಕ ಪ್ರತಿಷ್ಠಾನದ ಮ್ಯಾನೇಜಿಂಗ್ ಟ್ರಸ್ಟಿ ಅಜಿತ್ ಕುಮಾರ್ ಮಾಲಾಡಿ ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದರು. ಸೆ. 13ರಂದು ಸಾಯಂಕಾಲ ಶ್ರೀ ರಾಮದಾಸ್ ಆಚಾರ್ಯರ ಮಂಗಳೂರು: ಬಂಟರ ಯಾನೆ ನಾಡವರ ಮಾತೃಸಂಘ, ದಕ್ಷಿಣ ಕನ್ನಡ, ಉಡುಪಿ ಹಾಗೂ ಕಾಸರಗೋಡು ಜಿಲ್ಲೆಗಳ ಬಂಟರ ಸಂಘಗಳು ಮತ್ತು ಶ್ರೀ ಸಿದ್ಧಿವಿನಾಯಕ ಪ್ರತಿಷ್ಠಾನ ಹಾಗೂ ಸಾರ್ವಜನಿಕ ಶ್ರೀ ಗಣೇಶೋತ್ಸವ ಸಮಿತಿಯ ಆಶ್ರಯದಲ್ಲಿ ಸೆಪ್ಟೆಂಬರ್ 14ರಿಂದ 16ರವರೆಗೆ ಮಂಗಳೂರಿನ 'ಓಂಕಾರ ನಗರ' ಬಂಟ್ಸ್ ಹಾಸ್ಟೆಲ್‌ನಲ್ಲಿ ಶಿಷ್ಯರಿಂದ ರಚಿಸಲ್ಪಟ್ಟ ಶ್ರೀ ಸಿದ್ಧಿವಿನಾಯಕ ದೇವರ ವಿಗ್ರಹವನ್ನು ಬಂಟ್ಸ್ ಹಾಸ್ಟೆಲ್‌ನ ಓಂಕಾರ ನಗರಕ್ಕೆ ಭಕ್ತಿಪೂರ್ವಕವಾಗಿ ಬರಮಾಡಿಕೊಳ್ಳಲಾಗುವುದು. ಸೆ. 14ರಂದು ಧ್ವಜಾರೋಹಣ, ಗಣೇಶೋತ್ಸವ ಕಾರ್ಯಕ್ರಮಗಳ ಉದ್ಘಾಟನೆ, ಧಾರ್ಮಿಕ ಸಭೆ, ಸಾಧಕರಿಗೆ ಸನ್ಮಾನ ಹಾಗೂ ವಿವಿಧ ಸಾಂಸ್ಕೃತಿಕ ಸ್ಪರ್ಧಾ ಕಾರ್ಯಕ್ರಮಗಳು ಜರುಗಲಿವೆ ಎಂದರು.

## ಮಂಗಳೂರು ವಿಮಾನ ನಿಲ್ದಾಣಕ್ಕೆ ಎರಡು ಚಿನ್ನದ ಪದಕ



ಮಂಗಳೂರು : ಬೆಂಗಳೂರು ಕ್ಯೂಸಿಎಫ್‌ಐ ಅಧ್ಯಾಯ ಆಯೋಜಿಸಿದ್ದ ಗುಣಮಟ್ಟ ಪರಿಕಲ್ಪನೆಗಳ ಅಧ್ಯಾಯ ಸಮ್ಮೇಳನ 2026ರಲ್ಲಿ ಮಂಗಳೂರು ವಿಮಾನ ನಿಲ್ದಾಣವು ಎರಡು ಚಿನ್ನದ ಪದಕಗಳನ್ನು ಗೆದ್ದು ಗಮನಾರ್ಹ ಸಾಧನೆ ಮಾಡಿದೆ. 'ಟೀಮ್ ಮಾರ್ಗದೀಪ್' ತಂಡದ ಶ್ರೀ ಕೃಷ್ಣದಾಸ್ ಎಂ.ಎಸ್. ಮತ್ತು ಕುಮಾರಿ ಇಪ್ಸಿತಾ ಚೌಧರಿ ಅವರು ಸಹಯೋಗಿ ಪರಿಕಲ್ಪನೆ ವಿಭಾಗದಲ್ಲಿ ಚಿನ್ನದ ಪದಕ ಗಳಿಸಿದ್ದಾರೆ. ವಿಮಾನ ನಿಲ್ದಾಣದಲ್ಲಿ ಅಳವಡಿಸಿರುವ ನಿಖರ ಮಾರ್ಗಸೂಚಿ ಬೆಳಕು ವ್ಯವಸ್ಥೆ – ವರ್ಗ 1 (PAL ವರ್ಗ 1) ಕುರಿತು ಅವರು ಕೈಗೊಂಡ ಕಾರ್ಯಕ್ಕೆ ಈ ಪ್ರಶಸ್ತಿ ಲಭಿಸಿದೆ. ಸುರಕ್ಷತೆ ಮತ್ತು ಕಾರ್ಯಕ್ಷಮತೆಯನ್ನು ಮತ್ತಷ್ಟು ಬಲಪಡಿಸುವ ಉದ್ದೇಶದಿಂದ ಸಿಕ್ಸ್ ಸಿಗ್ಮಾ ಗುಣಮಟ್ಟ ವಿಧಾನ, ಸಮಗ್ರ ನಿರ್ವಹಣಾ ನಿಯಂತ್ರಣ ಹಾಗೂ ನೇರ ಸುರಕ್ಷತಾ ವಲಯ ವಿಧಾನಗಳನ್ನು ಈ ಯೋಜನೆಯಲ್ಲಿ ಸಮನ್ವಯಗೊಳಿಸಲಾಗಿದೆ. ಇದೇ ವೇಳೆ, 'ಟೀಮ್ ಸೇಫ್ ಎಡ್ಜ್' ತಂಡದ ಶ್ರೀ ಪ್ರಣಯ್ ಆಗಸ್ಟಿನ್ ಫ್ರಾನ್ಸಿಸ್ ಮತ್ತು ಶ್ರೀ ಪ್ರಜೇಶ್ ಪ್ರಕಾಶ್ ಅವರು ಸಹಯೋಗಿ (ಕೈಝೆನ್) ಪರಿಕಲ್ಪನೆ ವಿಭಾಗದಲ್ಲಿ ಚಿನ್ನದ ಪದಕ ಪಡೆದಿದ್ದಾರೆ.

## ಪರಿಸರ ಸಂರಕ್ಷಣೆ ನಮ್ಮೆಲ್ಲರ ಜವಾಬ್ದಾರಿ : ಕೆ. ಜೆ. ಜಾರ್ಜ್



ಮಂಗಳೂರು: ದೇಶದ ಅಭಿವೃದ್ಧಿಗೆ ಪರಿಸರದ ಅಗತ್ಯವೂ ಇದೆ ಹಾಗೂ ಪರಿಸರ ಸಂರಕ್ಷಣೆ ನಮ್ಮೆಲ್ಲರ ಜವಾಬ್ದಾರಿಯಾಗಿದೆ. ಪರಿಸರವಾದಿಗಳಿಗೆ ಮಾತ್ರ ಪರಿಸರದ ಬಗ್ಗೆ ಕಾಳಜಿ ಇದೆ ಎಂಬ ಭಾವನೆ ಬೇಡ, ಪರಿಸರ ಕಾಳಜಿಯು ನಮಗೂ ಇದೆ ಎಂದು ರಾಜ್ಯದ ಇಂಧನ ಮತ್ತು ಪ್ರವಾಸೋದ್ಯಮ ಸಚಿವ ಕೆ.ಜೆ. ಜಾರ್ಜ್ ಹೇಳಿದರು. ನಗರದ ಪುರಭವನದಲ್ಲಿ ನಡೆದ ಜಯಶ್ರೀ ಕೃಷ್ಣ ಪರಿಸರ ಪ್ರೇಮಿ ಸಮಿತಿಯ ಬೆಳ್ಳಿ ಹಬ್ಬ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಪರಿಸರ ಉಳಿಸಲು ಉದ್ಯಮಿಗಳು ಕೂಡ ಆಸಕ್ತರಾಗಿದ್ದಾರೆ. ಅಭಿವೃದ್ಧಿ ಯೋಜನೆಗಳಿಗೆ ಸಂಬಂಧಿಸಿದಂತೆ ಪರಿಸರ ನಿಯಂತ್ರಣ ಮಂಡಳಿಯ ಒಪ್ಪಿಗೆ ಪಡೆದೇ ಅನುಮೋದನೆ ನೀಡಲಾಗುತ್ತದೆ. ಜಗತ್ತಿನ ಅಭಿವೃದ್ಧಿಯ ವಿಚಾರವಾಗಿ ಪ್ರಶ್ನಿಸುವ ಹಾಗೂ ಪ್ರತಿಭಟಿಸುವ ಯುವಜನತೆಯ ಮನಸ್ಸನ್ನು ಅರಿಯಲು ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಅವರ ಜೊತೆ ಮುಕ್ತ ಮಾತುಕತೆ ನಡೆಸಿ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಬೇಕಿದೆ ಎಂದು ಹೇಳಿದರು.

## ಆಳ್ವಾಸ್ ಸಾಂಸ್ಕೃತಿಕ ವಿದ್ಯಾರ್ಥಿಗಳಿಗೆ ಕೋಡ್‌ಕ್ರಾಫ್ಟ್ ಸಂಸ್ಥೆಯಿಂದ ಸಿಎಸ್‌ಆರ್ ನೆರವು



ಮೂಡುಬಿದಿರೆ: ಶಿಕ್ಷಣದ ಜತೆಗೆ ಕಲೆ, ಸಂಸ್ಕೃತಿ ಮತ್ತು ಪರಂಪರೆಯ ಸಂರಕ್ಷಣೆಗೆ ಆದ್ಯತೆ ನೀಡುತ್ತಿರುವ ಆಳ್ವಾಸ್‌ನ ಸಾಂಸ್ಕೃತಿಕ ಚಟುವಟಿಕೆಗಳಿಗೆ ಮತ್ತಷ್ಟು ಉತ್ತೇಜನ ನೀಡುವ ನಿಟ್ಟಿನಲ್ಲಿ ಮಂಗಳೂರಿನ ಕೋಡ್‌ಕ್ರಾಫ್ಟ್ ಟೆಕ್ನಾಲಜೀಸ್ ಪ್ರೈವೇಟ್ ಲಿಮಿಟೆಡ್ ಸಂಸ್ಥೆಯು ತನ್ನ ಕಾರ್ಪೊರೇಟ್ ಸಾಮಾಜಿಕ ಹೊಣೆಗಾರಿಕೆ (CSR) ಉಪಕ್ರಮದಡಿ 6.28 ಲಕ್ಷ ಆರ್ಥಿಕ ನೆರವು ನೀಡಿದೆ. ಆಳ್ವಾಸ್‌ನ ನುಡಿಸಿರಿ ವಿರಾಸತ್ ಸಾಂಸ್ಕೃತಿಕ ತಂಡಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿರುವ 628 ವಿದ್ಯಾರ್ಥಿಗಳಿಗೆ ತಲಾ 1,000ರಂತೆ ಒಟ್ಟು 6,28,000 ನೆರವನ್ನು ವಿತರಿಸಲಾಗಿದ್ದು, ಕಾರ್ಯಕ್ರಮದಲ್ಲಿ ಸಾಂಕೇತಿಕವಾಗಿ ಕೆಲವು ವಿದ್ಯಾರ್ಥಿಗಳಿಗೆ ನೆರವಿನ ಮೊತ್ತವನ್ನು ಹಸ್ತಾಂತರಿಸಲಾಯಿತು. ಆಳ್ವಾಸ್ ಕಾಲೇಜಿನ ವಿ.ಎಸ್. ಆಚಾರ್ಯ ಸಭಾಂಗಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ಆಳ್ವಾಸ್ ಶಿಕ್ಷಣ ಪ್ರತಿಷ್ಠಾನದ ಅಧ್ಯಕ್ಷ ಡಾ. ಎಂ. ಮೋಹನ ಆಳ್ವ ಕೋಡ್‌ಕ್ರಾಫ್ಟ್ ಟೆಕ್ನಾಲಜೀಸ್‌ನ ಸಿಎಸ್‌ಆರ್ ಉಪಕ್ರಮವನ್ನು ಶ್ಲಾಘಿಸಿದರು.

## ಶಿಕ್ಷಣವೇ ಬದುಕಿನ ರಕ್ಷಾ ಕವಚ: ಜಯಲಕ್ಷ್ಮಿರಾಯಕೋಡ




ಮಂಗಳೂರು: ಅಕ್ಷರ ಕಲಿಯುವುದು ಮಾತ್ರವಲ್ಲದೆ, ಆ ಜ್ಞಾನವನ್ನು ದೈನಂದಿನ ಜೀವನದಲ್ಲಿ ನಿರಂತರವಾಗಿ ಬಳಸಿಕೊಂಡು ಸುಸ್ಥಿರಗೊಳಿಸಿದಾಗ ಮಾತ್ರ ಸಾಕ್ಷರತೆಯ ನಿಜವಾದ ಉದ್ದೇಶ ಸಾರ್ಥಕವಾಗುತ್ತದೆ ಎಂದು ದಕ್ಷಿಣ ಕನ್ನಡ ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಜಯಲಕ್ಷ್ಮಿ ರಾಯಕೋಡ ತಿಳಿಸಿದ್ದಾರೆ. ನಗರದ ಡಾ. ಬಿ.ಆರ್. ಅಂಬೇಡ್ಕರ್ ಸಭಾಭವನದಲ್ಲಿ ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ಇಲಾಖೆ, ಲೋಕ ಶಿಕ್ಷಣ ನಿರ್ದೇಶನಾಲಯ, ದ.ಕ. ಜಿಲ್ಲಾ ಪಂಚಾಯತ್, ಡಯಟ್ ಮಂಗಳೂರು, ಜಿಲ್ಲಾ ವಯಸ್ಕರ ಶಿಕ್ಷಣ ಇಲಾಖೆ ಹಾಗೂ ಜನ ಶಿಕ್ಷಣ ಟ್ರಸ್ಟ್ ಮತ್ತು ನವಸಾಕ್ಷರರ ಗ್ರಾಮ ವಿಕಾಸ ಕೇಂದ್ರದ ಜಂಟಿ ಆಶ್ರಯದಲ್ಲಿ ಆಯೋಜಿಸಲಾಗಿದ್ದ 60 ನೇ ಅಂತಾರಾಷ್ಟ್ರೀಯ ಸಾಕ್ಷರತಾ ದಿನಾಚರಣೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು. ಶಿಕ್ಷಣವು ತಾರ್ಕಿಕ ಆಲೋಚನೆಗೆ ಮೂಲವಾಗಿದ್ದು, ವ್ಯಕ್ತಿಯ ಬದುಕಿಗೆ ರಕ್ಷಾ ಕವಚದಂತೆ ಕಾರ್ಯನಿರ್ವಹಿಸುತ್ತದೆ. ಡಾ. ಬಿ.ಆರ್. ಅಂಬೇಡ್ಕರ್ ಅವರ ಅಪಾರ ಜ್ಞಾನ ಮತ್ತು ಶಿಕ್ಷಣದ ಬಲವೇ ಅವರ ಹೆಸರನ್ನು ಅಜರಾಮರಗೊಳಿಸಿದೆ ಎಂದರು.

## ಅಜೋಲಾ ಘಟಕಗಳ ಸ್ಥಾಪನೆಗೆ ಸರ್ಕಾರ ಚಾಲನೆ




ಮಂಗಳೂರು : ರಾಜ್ಯದಲ್ಲಿ ಜಾನುವಾರುಗಳಿಗೆ, ಅದರಲ್ಲೂ ವಿಶೇಷವಾಗಿ ಹಾಲು ನೀಡುವ ದನ-ಕರುಗಳಿಗೆ ಸ್ಥಳೀಯವಾಗಿಯೇ ಪೌಷ್ಟಿಕ ಪೂರಕ ಮೇವನ್ನು ಒದಗಿಸಲು ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವೆಗಳ ಇಲಾಖೆಯು ಮಹತ್ವದ ಯೋಜನೆಯೊಂದನ್ನು ಹಮ್ಮಿಕೊಂಡಿದೆ. ಮಳೆಯ ಅಭಾವ ಮತ್ತು ಹಸಿರು ಮೇವಿನ ಕೊರತೆಯ ಸಂದರ್ಭಗಳಲ್ಲಿ ಜಾನುವಾರುಗಳಿಗೆ ಅಗತ್ಯವಿರುವ ಪ್ರೋಟೀನ್ ಹಾಗೂ ಖನಿಜಾಂಶಗಳನ್ನು ಒದಗಿಸುವ ಸಲುವಾಗಿ ರಾಜ್ಯಾದ್ಯಂತ ಒಟ್ಟು 12,000 ಅಜೋಲಾ ಉತ್ಪಾದನಾ ಘಟಕಗಳನ್ನು ಉತ್ತೇಜಿಸಲು ಯೋಜನೆಗೆ ಚಾಲನೆ ನೀಡಲಾಗಿದೆ. ಈ ಯೋಜನೆಗಾಗಿ ರಾಜ್ಯದ ಎಲ್ಲಾ 31 ಜಿಲ್ಲೆಗಳ 240 ತಾಲ್ಲೂಕುಗಳಲ್ಲಿ ಒಟ್ಟು 3.78ಕೋಟಿ ರೂ. ವೆಚ್ಚ ಮಾಡಲು ಜಿಲ್ಲಾವಾರು ಭೌತಿಕ ಮತ್ತು ಆರ್ಥಿಕ ಗುರಿ ನಿಗದಿಪಡಿಸಲಾಗಿದೆ. ಈ ಅಜೋಲಾ ಘಟಕಗಳನ್ನು ರೈತರ ಮನೆ ಅಥವಾ ಕೊಟ್ಟಿಗೆಯ ಸಮೀಪವೇ ಅತ್ಯಲ್ಪ ಸ್ಥಳದಲ್ಲಿ (10 ಅಡಿ ಉದ್ದ, 4 ಅಡಿ ಅಗಲ ಹಾಗೂ 1 ಅಡಿ ಆಳ) ನಿರ್ಮಿಸಬಹುದಾಗಿದೆ.

## ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವಿರುದ್ಧದ ಅರ್ಜಿ ಸುಪ್ರೀಂ ಕೋರ್ಟ್‌ನಲ್ಲಿ ವಜಾ!



ಧರ್ಮಸ್ಥಳ : ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ (ರಿ.) ವಿರುದ್ಧ ರಂಜನ್ ರಾವ್ ಯರ್ಡೂರು ಅವರು ಸಲ್ಲಿಸಿದ್ದ ಮೇಲ್ಮನವಿ ಅರ್ಜಿಯನ್ನು ದೇಶದ ಸರ್ವೋಚ್ಚ ನ್ಯಾಯಾಲಯವಾದ ಸುಪ್ರೀಂ ಕೋರ್ಟ್ ಪ್ರಾಥಮಿಕ ಹಂತದಲ್ಲೇ ವಜಾಗೊಳಿಸಿದೆ. ಈ ಮೂಲಕ ಸಂಸ್ಥೆಯ ವಿರುದ್ಧ ಮಾಡಲಾಗಿದ್ದ ಆಧಾರರಹಿತ ಆರೋಪಗಳಿಗೆ ತೆರೆಬಿದ್ದಿದ್ದು, ಸುಪ್ರೀಂ ಕೋರ್ಟ್ ನೀಡಿದ ಈ ಆದೇಶವು ಐತಿಹಾಸಿಕ ತೀರ್ಪಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ವಿರುದ್ಧ ರಂಜನ್ ರಾವ್ ಯರ್ಡೂರು ಅವರು ಬೆಳ್ತಂಗಡಿಯ ಪ್ರಥಮ ದರ್ಜೆ ನ್ಯಾಯಾಲಯದಲ್ಲಿ ಖಾಸಗಿ ದೂರು ದಾಖಲಿಸಿದ್ದರು. ಮಾನ್ಯ ನ್ಯಾಯಾಲಯವು ಈ ಅರ್ಜಿಯನ್ನು ತಿರಸ್ಕರಿಸಿದಾಗ, ದೂರುದಾರರು ಮಂಗಳೂರು ಜಿಲ್ಲಾ ನ್ಯಾಯಾಲಯದಲ್ಲಿ ಪರಿಷ್ಕರಣಾ ದಾವೆ ಹೂಡಿದ್ದರು. ಈ ವಿಚಾರವಾಗಿ ಗ್ರಾಮಾಭಿವೃದ್ಧಿ ಯೋಜನೆಯು ಕರ್ನಾಟಕದ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ಅರ್ಜಿಯನ್ನು (CRL.P) ಸಲ್ಲಿಸಿತ್ತು.

## ಫಾದರ್ ಮುಲ್ಲರ್‌ನಲ್ಲಿ ವಿಶ್ವ ಫಿಸಿಯೋಥೆರಪಿ ದಿನಾಚರಣೆ



ಮಂಗಳೂರು: ವಿಶ್ವ ಫಿಸಿಯೋಥೆರಪಿ ದಿನಾಚರಣೆ 2026 ರ ಅಂಗವಾಗಿ ಮಂಗಳೂರಿನ ಫಾದರ್ ಮುಲ್ಲರ್ ಫಿಸಿಯೋಥೆರಪಿ ಕಾಲೇಜು (FMCOP) ವತಿಯಿಂದ ಹೃದಯರಕ್ತನಾಳದ ಕಾಯಿಲೆಗಳು ಮತ್ತು ಪಾರ್ಶ್ವವಾಯು (ಸ್ಟ್ರೋಕ್) ತಡೆಗಟ್ಟುವಿಕೆ, ನಿರ್ವಹಣೆ ಹಾಗೂ ಪುನರ್ವಸತಿಯಲ್ಲಿ ಫಿಸಿಯೋಥೆರಪಿ ಮತ್ತು ದೈಹಿಕ ಚಟುವಟಿಕೆಗಳ ಪಾತ್ರದ ಕುರಿತು ಬೃಹತ್ ಜಾಗೃತಿ ಅಭಿಯಾನವನ್ನು ಆಯೋಜಿಸಲಾಗಿದೆ. ಸತತವಾಗಿ ಕುಳಿತುಕೊಳ್ಳುವ ಅಭ್ಯಾಸವನ್ನು ಕಡಿಮೆ ಮಾಡುವುದು, ಸಕ್ರಿಯ ಜೀವನ ಶೈಲಿಯನ್ನು ಅಳವಡಿಸಿಕೊಳ್ಳುವುದು ಹಾಗೂ ದೈನಂದಿನ ಜೀವನದಲ್ಲಿ ನಿಯಮಿತ ದೈಹಿಕ ಚಟುವಟಿಕೆಗಳನ್ನು ಸೇರಿಸಿಕೊಳ್ಳುವ ಮೂಲಕ ಹೃದಯದ ಆರೋಗ್ಯ ಮತ್ತು ಒಟ್ಟಾರೆ ಯೋಗಕ್ಷೇಮವನ್ನು ಸುಧಾರಿಸುವುದು ಈ ಅಭಿಯಾನದ ಮುಖ್ಯ ಉದ್ದೇಶವಾಗಿದೆ. ಈ ಶುಭ ಸಂದರ್ಭದಲ್ಲಿ ಫಾದರ್ ಮುಲ್ಲರ್ ಚಾರಿಟೇಬಲ್ ಸಂಸ್ಥೆಗಳ (FMCI) ನಿರ್ದೇಶಕರು ಜಾಗೃತಿ ವೀಡಿಯೊವನ್ನು ಅಧಿಕೃತವಾಗಿ ಬಿಡುಗಡೆ ಮಾಡಿದರು.

# ಸುದ್ದಿ ತುಣುಕು

15ನೇ ಹಣಕಾಸು ಆಯೋಗದ ಶಿಫಾರಸಿನಂತೆ ಗ್ರಾಮ ಪಂಚಾಯತ್ ಗಳಿಗೆ ಬರಬೇಕಾದ 2186.20 ಕೋಟಿ ರೂ. ಅನುದಾನ ತಡೆಹಿಡಿದಿರುವ ಕೇಂದ್ರ ಸರಕಾರದ ವಿರುದ್ಧ ಸುಪ್ರೀಂ ಕೋರ್ಟ್ ಮೊರೆ ಹೋಗಲು ತೀರ್ಮಾನಿಸಲಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ. ಖಂಡ್ರೆ ಹೇಳಿದ್ದಾರೆ.

ಆಲ್ ಇಂಡಿಯಾ ಕಾಂಗ್ರೆಸ್ ಕಮಿಟಿ (ಎಐಸಿಸಿ)ಯು ಕರ್ನಾಟಕ ರಾಜ್ಯದ ಜಿಲ್ಲಾ ಸಮಿತಿಗಳಿಗೆ (ಡಿಸಿಸಿ) ನೂತನ ಅಧ್ಯಕ್ಷರನ್ನು ನೇಮಕ ಮಾಡಿದೆ. ಈ ಬಗ್ಗೆ ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಸಿ. ವೇಣುಗೋಪಾಲ್ ಸೆ.9ರಂದು ಅಧಿಕೃತ ಪಟ್ಟಿ ಬಿಡುಗಡೆ ಮಾಡಿದ್ದಾರೆ.

ರಾಜ್ಯದಲ್ಲಿ ನೆಮ್ಮದಿ ಶಾಂತಿ ನೆಲಸಲು ಕಾಂಗ್ರೆಸ್ ಗೆ ಅಧಿಕಾರ ನೀಡಲಾಗಿತ್ತು. ಅದರಂತೆ ಸೆಗಣಿ ಭಕ್ತರು ಕೋಮುದ್ವೇಷ ಹರಡುತ್ತಿರುವುದು ನಿಲ್ಲಿಸಿದ್ದು, ಇದು ನಮ್ಮ ದೊಡ್ಡ ಸಾಧನೆ ಎಂದು ಕೆಪಿಸಿಸಿ ಅಧ್ಯಕ್ಷ ಬಿ.ಕೆ.ಹರಿಪ್ರಸಾದ್ ಹೇಳಿದ್ದಾರೆ.

ರಾಜ್ಯದಲ್ಲಿನ ಬರ ಪರಿಸ್ಥಿತಿ ಕುರಿತು ಸರಕಾರ ಗಂಭೀರವಾಗಿದೆ. ಈಗಾಗಲೆ 101 ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸಿದ್ದೇವೆ. ಇನ್ನೂ 42 ತಾಲೂಕುಗಳಲ್ಲಿ ಅಧ್ಯಯನ ನಡೆಯುತ್ತಿದೆ. ಬರಪೀಡಿತ ತಾಲೂಕುಗಳ ಸಂಖ್ಯೆ 200ಕ್ಕೂ ಮೀರಬಹುದು ಎಂದು ಉಪ ಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ತಿಳಿಸಿದರು.

ಸಿನಿಮಾ ಹಾಗೂ ಸಾಂಸ್ಕೃತಿಕ ಕಾರ್ಮಿಕರ ಕಲ್ಯಾಣ ಯೋಜನೆಗಳಿಗೆ ಅನುದಾನ ಒದಗಿಸಲು ಚಿತ್ರಮಂದಿರ, ಮಲ್ಟಿಪ್ಲೆಕ್ಸ್‌ಗಳಲ್ಲಿ ಸಿನಿಮಾ ಟಿಕೆಟ್ ದರದ ಮೇಲೆ ಶೇ. 2 ಸೆಸ್ ವಿಧಿಸುವುದನ್ನು ಪ್ರಶ್ನಿಸಿ ಸಲ್ಲಿಸಲಾದ ಅರ್ಜಿ ಸಂಬಂಧ ರಾಜ್ಯ ಸರಕಾರಕ್ಕೆ ಹೈಕೋರ್ಟ್ ನೋಟಿಸ್ ಜಾರಿಗೊಳಿಸಿದೆ.

ಗ್ರೇಟರ್ ಬೆಂಗಳೂರು ಪ್ರಾಧಿಕಾರ(ಜಿಬಿಎ) ವ್ಯಾಪ್ತಿಯಲ್ಲಿ ಸಾರ್ವಜನಿಕರ ದೂರುಗಳ ಪರಿಹಾರ ವ್ಯವಸ್ಥೆಯನ್ನು ಮತ್ತಷ್ಟು ಜನಸ್ನೇಹಿ, ಪಾರದರ್ಶಕ ಹಾಗೂ ಪರಿಣಾಮಕಾರಿಗೊಳಿಸುವ ಉದ್ದೇಶದಿಂದ 'ಸಹಾಯ 3.0' ತಂತ್ರಾಂಶವನ್ನು ಅಭಿವೃದ್ಧಿಪಡಿಸಲಾಗುತ್ತಿದೆ ಎಂದು ಜಿಬಿಎ ಸಚಿವ ಕೃಷ್ಣ ಬೈರೇಗೌಡ ತಿಳಿಸಿದರು.

ಖ್ಯಾತ ಗಗನಯಾತ್ರಿ ಸುನೀತಾ ವಿಲಿಯಮ್ಸ್ ಭವಿಷ್ಯದ ಮಾನವ ಬಾಹ್ಯಾಕಾಶ ಹಾರಾಟಕ್ಕೆ ಹೆಚ್ಚಿನ ಅಂತಾರಾಷ್ಟ್ರೀಯ ಸಹಕಾರ ಅಗತ್ಯವಿದೆ. ಮಾನವೀಯತೆಯು ಚಂದ್ರನಿಗೆ ಮರಳಿ ಇನ್ನಷ್ಟು ದೂರದ ಬಾಹ್ಯಾಕಾಶಕ್ಕೆ "ಒಂದು ದೇಶವಾಗಿ ಅಲ್ಲ, ಮನುಷ್ಯರಾಗಿ" ಹೋಗುತ್ತದೆ ಎಂದು ಹೇಳಿದ್ದಾರೆ.

ಕಸ್ತೂರಿ ರಂಗನ್ ವರದಿಯನ್ನು ಯಾವುದೇ ಕಾರಣಕ್ಕೂ ಜಾರಿಗೆ ಅವಕಾಶ ನೀಡುವುದಿಲ್ಲ. ಮಲೆನಾಡಿನ ರೈತರು, ಕೃಷಿ, ಪರಿಸರ ಹಾಗೂ ಜನರ ಬದುಕನ್ನು ರಕ್ಷಿಸುವುದು ನಮ್ಮ ಕಾಂಗ್ರೆಸ್ ಸರಕಾರದ ಪ್ರಮುಖ ಗುರಿಯಾಗಿದೆ ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಮಧು ಬಂಗಾರಪ್ಪ ಹೇಳಿದ್ದಾರೆ.

ಪ್ರಸಿದ್ಧ ಗುರುವಾಯೂರು ಶ್ರೀ ಕೃಷ್ಣ ದೇವಾಲಯದಲ್ಲಿ ಇದೇ ಸೆಪ್ಟಂಬರ್ 13 ರಂದು 400ಕ್ಕೂ ಹೆಚ್ಚು ಜೋಡಿಗಳ ಸಾಮೂಹಿಕ ವಿವಾಹ ನಡೆಯಲಿದ್ದು, ಈಗಾಗಲೇ 409 ಸಮಾರಂಭಗಳು ನಿಗದಿಯಾಗಿವೆ ಎಂದು ದೇವಸ್ವಂ ಮಂಡಳಿ ತಿಳಿಸಿದೆ.

## ಮೋದಕ



**ಬೇಕಾಗುವ ಸಾಮಾಗ್ರಿಗಳು :**
ಮೈದಾ ಹಿಟ್ಟು – 1 ಕಪ್,
ಚಿರೋಟಿ ರವೆ – 1/4 ಕಪ್,
ಉಪ್ಪು – ಚಿಟಿಕೆ,
ಬೆಲ್ಲ – 1 ಅಚ್ಚು,
ಕೊಬ್ಬರಿ ತುರಿ – 1 ಕಪ್,
ಏಲಕ್ಕಿ ಪುಡಿ – ಚಿಟಿಕೆ,
ಗಸಗಸೆ – 1 ಚಮಚ,
ಎಳ್ಳು – ಸ್ವಲ್ಪ,
ಗೋಡಂಬಿ – 10
ಬಾದಾಮಿ – 5–6
ಎಣ್ಣೆ ಕರಿಯಲು ಬೇಕಾಗುವಷ್ಟು.

**ಮಾಡುವ ವಿಧಾನ :**
ಮೊದಲಿಗೆ ಒಂದು ಬಟ್ಟಲಿಗೆ ಚಿರೋಟಿ ರವೆ, ಮೈದಾ ಹಿಟ್ಟು, ಉಪ್ಪು ಸೇರಿಸಿ ಚಪಾತಿ ಹಿಟ್ಟಿನ ಹದಕ್ಕೆ ಕಲಸಿಕೊಂಡು ತಟ್ಟೆ ಮುಚ್ಚಿಡಿ. ನಂತರ ಒಂದು ಪ್ಯಾನ್ ಅನ್ನು ಒಲೆಯ ಮೇಲಿಟ್ಟು ಅದಕ್ಕೆ ಸೋಸಿಕೊಂಡ ಬೆಲ್ಲದ ನೀರು, ಕೊಬ್ಬರಿ ತುರಿಯನ್ನು ಹಾಕಿ ಫ್ರೈ ಮಾಡಬೇಕು. ಹೂರಣ ಸ್ವಲ್ಪ ಗಟ್ಟಿಯಾದಂತೆ ಅದಕ್ಕೆ ಏಲಕ್ಕಿ ಪುಡಿ, ಹುರಿದ ಗಸಗಸೆ, ಪುಡಿ ಮಾಡಿದ ಎಳ್ಳು, ಹುರಿದು ಸಣ್ಣಗೆ ಹೆಚ್ಚಿದ ಗೋಡಂಬಿ, ಬಾದಾಮಿ ಸೇರಿಸಿ ಮಿಕ್ಸ್ ಮಾಡಿ ತಣ್ಣಗಾಗಲು ಬಿಡಬೇಕು. ಈಗ ಹಿಟ್ಟನ್ನು ತೆಗೆದುಕೊಂಡು ಪೂರಿ ಆಕಾರಕ್ಕಿಂತ ಸ್ವಲ್ಪ ಕಡಿಮೆ ಲಟ್ಟಿಸಿ ಅದರೊಳಗೆ 1/2 ಚಮಚ ಹೂರಣ ಸೇರಿಸಿ ಬೆಳ್ಳುಳ್ಳಿ ಆಕಾರಕ್ಕೆ ಮಧ್ಯಕ್ಕೆ ಮಡಚಬೇಕು. ಆಮೇಲೆ ಈ ಮೋದಕಗಳನ್ನು ಕಾದ ಎಣ್ಣೆಯಲ್ಲಿ ಹಾಕಿ ಕರಿದರೆ ಗಣಪನಿಗೆ ಪ್ರೀಯವಾದ ರುಚಿಕರವಾದ ಮೋದಕ ಸವಿಯಲು ಸಿದ್ಧ.

## ವಿಜೃಂಭಿಸಿದ ಜಪಾನ್‌ನ ತೇಲುವ ಸೌರ ವಿದ್ಯುತ್ ಸ್ಥಾವರ



ಜಪಾನ್ : ಭೂಮಿಯ ಅಭಾವ ಎದುರಿಸುತ್ತಿರುವ ಜಪಾನ್ ದೇಶವು ನವೀಕರಿಸಬಹುದಾದ ಇಂಧನ ಉತ್ಪಾದನೆಗಾಗಿ ಖಾಲಿ ಅಣೆಕಟ್ಟುಗಳು ಹಾಗೂ ಜಲಾಶಯಗಳ ಮೇಲ್ಮೈಯಲ್ಲಿ ತೇಲುವ ಸೌರ ವಿದ್ಯುತ್ ಉತ್ಪಾದನಾ ಘಟಕಗಳನ್ನು ನಿರ್ಮಿಸುವ ಮೂಲಕ ಜಗತ್ತಿಗೆ ಹೊಸ ಹಾದಿ ತೋರಿಸಿಕೊಟ್ಟಿತ್ತು. 'ಕ್ಯೋಸೆರಾ ಟಿಸಿಎಲ್ ಸೋಲಾರ್' ಜಂಟಿ ಉದ್ಯಮದ ಸಹಯೋಗದೊಂದಿಗೆ 2018ರ ಮಾರ್ಚ್ ವೇಳೆಗೆ ಚಿಬಾ ಪ್ರಿಫೆಕ್ಚರ್‌ನ ಯಮಕುರಾ ಅಣೆಕಟ್ಟು ಜಲಾಶಯದಲ್ಲಿ 44 ಎಕರೆ ಪ್ರದೇಶದಷ್ಟು ವಿಸ್ತಾರವಾದ ಬೃಹತ್ ತೇಲುವ ಸೌರ ಸ್ಥಾವರವನ್ನು ಸ್ಥಾಪಿಸಲಾಗಿತ್ತು.

## ಬ್ರಿಕ್ಸ್ ಶೃಂಗಸಭೆಗೆ ಮುನ್ನ ಇರಾನ್ ರಾಜತಾಂತ್ರಿಕ ಕಸರತ್ತು

ಟೆಹರಾನ್ : ಪಶ್ಚಿಮ ಏಷ್ಯಾದಲ್ಲಿ ಸಂಘರ್ಷ ತೀವ್ರಗೊಳ್ಳುತ್ತಿರುವ ಬೆನ್ನಲ್ಲೇ, ತನ್ನ ವಿರುದ್ಧ ಅಮೆರಿಕ ಕೈಗೊಂಡಿರುವ ಕ್ರಮಗಳನ್ನು ಖಂಡಿಸುವಂತೆ ಬ್ರಿಕ್ಸ್ (BRICS) ಸದಸ್ಯ ರಾಷ್ಟ್ರಗಳನ್ನು ಒಗ್ಗೂಡಿಸಲು ಇರಾನ್ ತನ್ನ ರಾಜತಾಂತ್ರಿಕ ಪ್ರಯತ್ನಗಳನ್ನು ಚುರುಕುಗೊಳಿಸಿದೆ. ಶೃಂಗಸಭೆಗೂ ಮುನ್ನ ಒಕ್ಕೂಟದ ಬೆಂಬಲ ಪಡೆಯುವುದು ಟೆಹ್ರಾನ್‌ನ ಮುಖ್ಯ ಉದ್ದೇಶವಾಗಿದ್ದರೂ, ಇರಾನ್ ಮತ್ತು ಯುನೈಟೆಡ್ ಅರಬ್ ಎಮಿರೇಟ್ಸ್ (ಯುಎಇ) ನಡುವಿನ ಆಂತರಿಕ ಭಿನ್ನಾಭಿಪ್ರಾಯ ಹಾಗೂ




ಬಿಕ್ಕಟ್ಟುಗಳಿಂದಾಗಿ ಶೃಂಗಸಭೆಯ ಅಂತಿಮ ಒಮ್ಮತದ ಅಧಿಕೃತ ಘೋಷಣೆಯಲ್ಲಿ ಈ ವಿಚಾರವನ್ನು ಸೇರಿಸಲು ತೊಡಕುಗಳು ಎದುರಾಗುವ ಸಾಧ್ಯತೆಯಿದೆ.

## ಇಸ್ರೇಲ್ ಮೇಲೆ ದಾಳಿ : ಗುಪ್ತಚರ ಸಂಸ್ಥೆಗಳ ಎಚ್ಚರಿಕೆ




ಟೆಲ್ ಅವೀವ್: 2023ರ ಅಕ್ಟೋಬರ್ 7 ರಂದು ಹಮಾಸ್ ಉಗ್ರರು ಇಸ್ರೇಲ್ ಮೇಲೆ ನಡೆಸಿದ್ದ ಭೀಕರ ದಾಳಿಯ ಮಾದರಿಯಲ್ಲೇ, ಅದಕ್ಕಿಂತಲೂ ಅತ್ಯಂತ ಭೀಕರವಾದ ದಾಳಿ ನಡೆಸಲು ಇರಾನ್ ಬೃಹತ್ ಸಂಚು ರೂಪಿಸುತ್ತಿದೆ ಎಂದು ಇಸ್ರೇಲಿ ಗುಪ್ತಚರ ಸಂಸ್ಥೆಗಳ ಮೂಲಗಳನ್ನು ಉಲ್ಲೇಖಿಸಿ ವರದಿಗಳು ತಿಳಿಸಿವೆ. ಇರಾನ್ ತನ್ನ ಪ್ರಾಕ್ಸಿ ಸಂಘಟನೆಗಳನ್ನು ಒಟ್ಟುಗೂಡಿಸಿ ಇಸ್ರೇಲ್ ವಿರುದ್ಧ ಬೃಹತ್ ಪ್ರಮಾಣದ 'ಬಹು-ರಂಗಗಳ' ದಾಳಿ ನಡೆಸಲು ಹೊರಟಿದೆ. ಯಹೂದಿ ಹಬ್ಬಗಳ ಸಂದರ್ಭದಲ್ಲಿ ಈ ದಾಳಿ ನಡೆಯುವ ಸಾಧ್ಯತೆಯಿದೆ ಎಂದು ಇಸ್ರೇಲ್ ರಕ್ಷಣಾ ಸಚಿವಾಲಯ ಕಳವಳ ವ್ಯಕ್ತಪಡಿಸಿದೆ.

## ನ. 27 'ಅಂತರರಾಷ್ಟ್ರೀಯ ಬಾಲ್ಯವಿವಾಹ ಮುಕ್ತ ದಿನ'

ನ್ಯೂಯಾರ್ಕ್: ಬಾಲ್ಯ ಹಾಗೂ ಬಲವಂತದ ವಿವಾಹಗಳ ನಿರ್ಮೂಲನೆಗಾಗಿ ಪ್ರತಿ ವರ್ಷ ನವೆಂಬರ್ 27 ಅನ್ನು 'ಅಂತರರಾಷ್ಟ್ರೀಯ ಬಾಲ್ಯ ವಿವಾಹ ಮುಕ್ತ ದಿನ'ವಾಗಿ ಘೋಷಿಸುವ ವಿಶ್ವಸಂಸ್ಥೆಯ ಸಾಮಾನ್ಯ ಸಭೆಯ ನಿರ್ಣಯಕ್ಕೆ ಭಾರತ ಸಹ-ಪ್ರಾಯೋಜಕತ್ವ ನೀಡಿದೆ. ಸಿಯೆರಾ ಲಿಯೋನ್ ನೇತೃತ್ವದಲ್ಲಿ ನಡೆದ ಸಾಮಾನ್ಯ ಸಭೆಯಲ್ಲಿ 193 ಸದಸ್ಯ ರಾಷ್ಟ್ರಗಳ ಪ್ರತಿನಿಧಿಗಳು ಈ ನಿರ್ಣಯವನ್ನು ಸರ್ವಾನುಮತದಿಂದ ಅಂಗೀಕರಿಸಿದ್ದಾರೆ. ಭಾರತದಲ್ಲಿ 2024ರ ನ.27ರಂದು 'ಬಾಲ್ಯ ವಿವಾಹ ಮುಕ್ತ



ಭಾರತ' ಅಭಿಯಾನಕ್ಕೆ ಚಾಲನೆ ನೀಡಲಾಗಿತ್ತು.

## ಅನಕ್ ಕ್ರಾಕಟೌ ಜ್ವಾಲಾಮುಖಿ ಭೀಕರ ಸ್ಫೋಟ




ಜಕಾರ್ತಾ : ಇಂಡೋನೇಷ್ಯಾದ ಸುಂದಾ ಜಲಸಂಧಿಯಲ್ಲಿರುವ ಜಾವಾ ಮತ್ತು ಸುಮಾತ್ರಾ ದ್ವೀಪಗಳ ನಡುವಿನ ಸಕ್ರಿಯ ಜ್ವಾಲಾಮುಖಿ ದ್ವೀಪವಾದ ಅನಕ್ ಕ್ರಾಕಟೌ ಭಾನುವಾರ ಮುಂಜಾನೆ ಭೀಕರವಾಗಿ ಸ್ಫೋಟಗೊಂಡಿದೆ. ಶನಿವಾರದಿಂದಲೇ ರೌದ್ರಾವತಾರ ತೋರುತ್ತಿದ್ದ ಈ ಜ್ವಾಲಾಮುಖಿಯು ಭಾನುವಾರ ಬೆಳಗಿನ ಜಾವ 3:53 ಕ್ಕೆ ಸುಮಾರು 30 ಸೆಕೆಂಡುಗಳ ಕಾಲ ತೀವ್ರವಾಗಿ ಸ್ಫೋಟಗೊಂಡಿದೆ ಎಂದು ಇಂಡೋನೇಷ್ಯಾದ ಭೂವೈಜ್ಞಾನಿಕ ಇಲಾಖೆ ಖಚಿತಪಡಿಸಿದೆ. ಜ್ವಾಲಾಮುಖಿಯಿಂದ ಎದ್ದ ದಟ್ಟವಾದ ಬೂದಿಯು ರಾಜಧಾನಿ ಜಕಾರ್ತಾ ಸೇರಿದಂತೆ ಸುಮಾತ್ರಾ ದ್ವೀಪದ ದಕ್ಷಿಣ ತುದಿಯ ಲ್ಯಾಂಪಂಗ್ ಪ್ರಾಂತ್ಯಕ್ಕೂ ಹರಡಿದೆ.

## ಜಪಾನ್ ವಿರುದ್ಧ ಭಾರತ ಭರ್ಜರಿ ಗೆಲುವು

ಹೈದರಾಬಾದ್ : ಮಹಿಳಾ ಜೂನಿಯರ್ ಹಾಕಿ ಏಷ್ಯಾ ಕಪ್ ಟೂರ್ನಿಯಲ್ಲಿ ಭಾರತ ತಂಡ ತನ್ನ ಅಪ್ರತಿಮ ಪ್ರಾಬಲ್ಯವನ್ನು ಮುಂದುವರಿಸಿದ್ದು, ಮಂಗಳವಾರ ನಡೆದ ಎಲೈಟ್ ಪೂಲ್‌ನ ಮೂರನೇ ಪಂದ್ಯದಲ್ಲಿ ಜಪಾನ್ ವಿರುದ್ಧ 7–0 ಅಂತರದ ಬೃಹತ್ ಗೆಲುವು ಸಾಧಿಸಿ ಕ್ವಾರ್ಟರ್ ಫೈನಲ್ ಪ್ರವೇಶಿಸಿದೆ. ಈ ಜಯದೊಂದಿಗೆ ಆಡಿದ ಮೂರೂ ಪಂದ್ಯಗಳಲ್ಲಿ 9 ಅಂಕಗಳನ್ನು ಪಡೆದುಕೊಂಡಿರುವ ಭಾರತ ತಂಡ, ಎಲೈಟ್ ಪೂಲ್ ಅಂಕಪಟ್ಟಿಯಲ್ಲಿ ಅಗ್ರಸ್ಥಾನದಲ್ಲಿದೆ.



## ಚಾಂಪಿಯನ್ ಪಟ್ಟಕ್ಕೇರಿದ ಸಾತ್ವಿಕ್–ಚಿರಾಗ್ ಜೋಡಿ



ಚೀನಾ : ಭಾರತದ ತಾರಾ ಪುರುಷರ ಡಬಲ್ಸ್ ಜೋಡಿಯಾದ ಸಾತ್ವಿಕ್‌ಸಾಯಿರಾಜ್ ರಾಂಕಿರೆಡ್ಡಿ ಮತ್ತು ಚಿರಾಗ್ ಶೆಟ್ಟಿ ಚೀನಾ ಮಾಸ್ಟರ್ಸ್ ಸೂಪರ್ 750 ಟೂರ್ನಮೆಂಟ್‌ನಲ್ಲಿ ಐತಿಹಾಸಿಕ ಪ್ರಶಸ್ತಿ ಗೆಲ್ಲುವ ಮೂಲಕ ಹೊಸ ದಾಖಲೆ ಬರೆದಿದ್ದಾರೆ. ಫೈನಲ್ ಪಂದ್ಯದಲ್ಲಿ ಭಾರತೀಯ ಜೋಡಿಯು ಚೀನಾದ ಪ್ರಬಲ ಸ್ಪರ್ಧಿಗಳಾದ ಹೆ ಜಿ ಟಿಂಗ್ ಮತ್ತು ರೆನ್ ಕ್ಸಿಯಾಂಗ್ ಯು ಅವರನ್ನು 11–21, 21–13, 21–17 ಗೇಮ್‌ಗಳ ಅಂತರದಿಂದ ಪರಾಭವಗೊಳಿಸಿತು.

## 3 ವಿಶ್ವ ದಾಖಲೆ ಬರೆದ ಶಫಾಲಿ ವರ್ಮಾ!

ದುಬೈ : ಟೀಮ್ ಇಂಡಿಯಾದ ಸ್ಫೋಟಕ ಆರಂಭಿಕ ಆಟಗಾರ್ತಿ ಶಫಾಲಿ ವರ್ಮಾ ಮಹಿಳಾ ಟಿ20 ಕ್ರಿಕೆಟ್‌ನಲ್ಲಿ ಅಪರೂಪದ ಸಾಧನೆ ಮಾಡುವ ಮೂಲಕ ಒಂದೇ ಪಂದ್ಯದಲ್ಲಿ ಮೂರು ಹೊಸ ವಿಶ್ವ ದಾಖಲೆಗಳನ್ನು ತಮ್ಮ ಹೆಸರಿಗೆ ಬರೆದುಕೊಂಡಿದ್ದಾರೆ. ದುಬೈ ಇಂಟರ್‌ನ್ಯಾಷನಲ್ ಸ್ಟೇಡಿಯಂನಲ್ಲಿ ನಡೆದ ಏಷ್ಯಾಕಪ್ ಪಂದ್ಯದಲ್ಲಿ ಪಾಕಿಸ್ತಾನ ವಿರುದ್ಧ ಇನಿಂಗ್ಸ್ ಆರಂಭಿಸಿದ ಶಫಾಲಿ, ಗಳಿಸಿದ್ದು ಕೇವಲ 12 ರನ್‌ಗಳಾದರೂ ಐತಿಹಾಸಿಕ



ಮೈಲಿಗಲ್ಲುಗಳನ್ನು ನೆಟ್ಟಿದ್ದಾರೆ.

## ಯಶವಂತಪುರ ಎಪಿಎಂಸಿಯಲ್ಲಿ 19 ಬಾಲ ಕಾರ್ಮಿಕರ ರಕ್ಷಣೆ!



ಬೆಂಗಳೂರು: ಹೊರರಾಜ್ಯ ಹಾಗೂ ಸ್ಥಳೀಯ ಮೂಲದ 19 ಬಾಲ ಕಾರ್ಮಿಕರನ್ನು ನಗರದ ಉತ್ತರ ವಿಭಾಗದ ಪೊಲೀಸರು ದಿಢೀರ್ ಕಾರ್ಯಾಚರಣೆ ನಡೆಸಿ ರಕ್ಷಿಸಿದ್ದಾರೆ. ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಯಶವಂತಪುರ ಎಪಿಎಂಸಿ ಮಾರುಕಟ್ಟೆಗೆ ಭೇಟಿ ನೀಡಿ ರೈತರು ಹಾಗೂ ವರ್ತಕರ ಕುಂದುಕೊರತೆಗಳನ್ನು ಆಲಿಸಿದ್ದರು. ಈ ವೇಳೆ ಮಾರುಕಟ್ಟೆಯಲ್ಲಿ ಸಣ್ಣ ವಯಸ್ಸಿನ ಮಕ್ಕಳು ಕಠಿಣ ಹಾಗೂ ಅಪಾಯಕಾರಿ ಕೆಲಸಗಳಲ್ಲಿ ತೊಡಗಿರುವುದನ್ನು ಕಂಡು ತೀವ್ರ ಅಸಮಾಧಾನ ವ್ಯಕ್ತಪಡಿಸಿದ ಮುಖ್ಯಮಂತ್ರಿಗಳು, ಸಂಬಂಧಪಟ್ಟ ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡು ತಕ್ಷಣವೇ ಕ್ರಮ ಕೈಗೊಳ್ಳುವಂತೆ ಸೂಚನೆ ನೀಡಿದ್ದರು.

## ಯೋಜನೆ ಪೂರ್ಣಗೊಳಿಸಲು ಅಧಿಕಾರಿಗಳಿಗೆ ಡಾ. ಸಿ.ಟಿ. ರವಿ ಸೂಚನೆ

ಚಿಕ್ಕಮಗಳೂರು: ಜಿಲ್ಲೆಯ ಬಯಲುಸೀಮೆ ಭಾಗದ ರೈತರ ಬಹುದಿನಗಳ ನಿರೀಕ್ಷೆಯಾಗಿರುವ 1,281.80 ಕೋಟಿ ಅಂದಾಜು ವೆಚ್ಚದ ಮಹತ್ವಾಕಾಂಕ್ಷಿ ನೀರಾವರಿ ಯೋಜನೆಯ ಮೂರನೇ ಹಂತದ ಕಾಮಗಾರಿಯನ್ನು ಶೀಘ್ರವಾಗಿ ಪೂರ್ಣಗೊಳಿಸುವಂತೆ ಮಾಜಿ ಸಚಿವರೂ ಹಾಗೂ ವಿಧಾನ ಪರಿಷತ್ ಶಾಸಕರಾದ



ಡಾ. ರವಿ ಸಿ.ಟಿ ಅವರು ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಚಿಕ್ಕಮಗಳೂರಿನ ಡಿಸಿಸಿ ಬ್ಯಾಂಕ್‌ನಲ್ಲಿ ಭದ್ರಾ ಉಪ ಜಲಾನಯನ ಪ್ರದೇಶದಿಂದ ಕೆರೆಗಳಿಗೆ ನೀರು ತುಂಬಿಸುವ ಯೋಜನೆಗೆ ಸಂಬಂಧಿಸಿದಂತೆ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಅವರು, ಕಾಮಗಾರಿಗಳ ಪ್ರಗತಿಯನ್ನು ಪರಿಶೀಲಿಸಿ ಮಾಹಿತಿ ಪಡೆದುಕೊಂಡರು.

## ಮುಂದಿನ ಸಿಎಂ ಸಿದ್ದರಾಮಯ್ಯ : ಪ್ರದೀಪ್ ಈಶ್ವರ್ ಘೋಷಣೆ

ಬೆಂಗಳೂರು : ಕರ್ನಾಟಕ ರಾಜ್ಯ ಹಿಂದುಳಿದ ಜಾತಿಗಳ ಒಕ್ಕೂಟದ ವತಿಯಿಂದ ಆಯೋಜಿಸಲಾಗಿದ್ದ ಬೃಹತ್ ಜನಜಾಗೃತಿ ಸಮಾವೇಶದಲ್ಲಿ ಚಿಕ್ಕಬಳ್ಳಾಪುರ ಶಾಸಕ ಪ್ರದೀಪ್ ಈಶ್ವರ್ ಅವರು ಸಿದ್ದರಾಮಯ್ಯ ಅವರನ್ನು 'ಮುಂದಿನ ಮುಖ್ಯಮಂತ್ರಿ' ಎಂದು ಘೋಷಿಸುವ ಮೂಲಕ ರಾಜ್ಯ ರಾಜಕೀಯದಲ್ಲಿ ಹೊಸ ಚರ್ಚೆಗೆ ದಾರಿ ಮಾಡಿಕೊಟ್ಟಿದ್ದಾರೆ. ಕಾರ್ಯಕ್ರಮದಲ್ಲಿ ಮಾತನಾಡಿದ ಶಾಸಕ ಪ್ರದೀಪ್ ಈಶ್ವರ್, 'ನಾನು ರಾಜಕಾರಣಕ್ಕೆ ಬಂದು ಮೂರು ವರ್ಷಗಳಾಗಿದ್ದರೆ, ಸಿದ್ದರಾಮಯ್ಯನವರು ಕಳೆ ದ 45 ವರ್ಷಗಳಿಂದ ಸುದೀರ್ಘ ಹೋರಾಟ ನಡೆಸಿಕೊಂಡು ಬಂದಿದ್ದಾರೆ. ನನ್ನ ಎದೆಯಲ್ಲಿ ಶ್ರೀರಾಮನೂ ಇದ್ದಾನೆ, ಸಿದ್ದರಾಮಯ್ಯನವರೂ ಇದ್ದಾರೆ" ಎಂದರು.



## ನಮ್ಮ ಮಕ್ಕಳು ಉದ್ಯೋಗಾಕಾಂಕ್ಷಿಗಳಾಗದೆ ಉದ್ಯೋಗದಾತರಾಗಬೇಕು–ಸಿಎಂ

ಬೆಂಗಳೂರು: ರಾಜ್ಯದಲ್ಲಿರುವಂತಹ ಪ್ರತಿಭಾವಂತ ಮಾನವ ಸಂಪನ್ಮೂಲ ದೇಶದ ಬೇರಾವ ರಾಜ್ಯಗಳಲ್ಲೂ ಇಲ್ಲ. ನಮ್ಮ ಮಕ್ಕಳು ಜಾಗತಿಕ ಮಟ್ಟದಲ್ಲಿ ಕಲಿಯುವ ಮೂಲಕ ಕೇವಲ ಉದ್ಯೋಗಿಗಳಾಗದೆ, ಉದ್ಯೋಗದಾತರಾಗಬೇಕು ಎಂಬುದೇ ಸರ್ಕಾರದ ಆಶಯ ಎಂದು ಮುಖ್ಯಮಂತ್ರಿ ಡಿ. ಕೆ. ಶಿ. ಹೇಳಿದರು.




'ವಿದೇಶದಲ್ಲಿ ಅಧ್ಯಯನ 2026' ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಸಾಗರೋತ್ತರ ಜ್ಞಾನವನ್ನು ಬೆಸೆಯಲು ಸರ್ಕಾರ ಹೊಸ ಬಾಗಿಲು ತೆರೆದಿದೆ. ಜ್ಞಾನದ ಮೇಲಿನ ಹೂಡಿಕೆ ಪ್ರತಿಯೊಬ್ಬರಿಗೂ ಅತ್ಯುತ್ತ ಮ ಆಸ್ತಿಯಾಗಲಿದೆ. ಮಾನವನಿಗೆ ಎಲ್ಲೆಗಳಿರಬ ಹುದು, ಆದರೆ ಜ್ಞಾನಕ್ಕೆ ಯಾವುದೇ ಎಲ್ಲೆಗಳಿಲ್ಲ ಎಂದರು.

## ಅಡಿಕೆ ತಟ್ಟೆ, ಪೇಪರ್ ಕಪ್ ಬಳಕೆಗೆ ನಿಷೇಧ: ಸಾರ್ವಜನಿಕರ ಆಕ್ರೋಶ



ಮಡಿಕೇರಿ: ಕೊಡಗು ಜಿಲ್ಲೆಯ ಮಡಿಕೇರಿ ನಗರಸಭೆ ವ್ಯಾಪ್ತಿಯಲ್ಲಿ ಅಡಿಕೆ ತಟ್ಟೆಗಳು, ಪೇಪರ್ ಕಪ್‌ಗಳು ಹಾಗೂ ಪೇಪರ್ ಪ್ಲೇಟ್‌ಗಳ ಬಳಕೆ ಮತ್ತು ಮಾರಾಟವನ್ನು ಸಂಪೂರ್ಣವಾಗಿ ನಿಷೇಧಿಸಿ ನಗರಸಭೆ ಆಡಳಿತ ಮಂಡಳಿ ಹಾಗೂ ಪೌರಾಯುಕ್ತರು ಆದೇಶ ಹೊರಡಿಸಿದ್ದಾರೆ. ಈ ನೂತನ ನಿಯಮದಂತೆ ಪೇಪರ್ ಕಪ್‌ಗಳು, ಕಂಟೈನರ್‌ಗಳು, ಅಡಿಕೆ ಹಾಳೆಯ ತಟ್ಟೆಗಳು, ಪೇಪರ್ ಪ್ಲೇಟ್‌ಗಳು ಹಾಗೂ ಕಾಲು, ಅರ್ಧ ಮತ್ತು 1 ಲೀಟರ್ ಸಾಮರ್ಥ್ಯದ ನೀರಿನ ಬಾಟಲಿಗಳ ಬಳಕೆಗೆ ನಿರ್ಬಂಧ ವಿಧಿಸಲಾಗಿದೆ. ಈ ಏಕಾಏಕಿ ನಿರ್ಧಾರಕ್ಕೆ ಮಡಿಕೇರಿಯ ಸಾರ್ವಜನಿಕರು ಹಾಗೂ ವ್ಯಾಪಾರಿಗಳಿಂದ ತೀವ್ರ ವಿರೋಧ ವ್ಯಕ್ತವಾಗಿದೆ.

## ಗಣೇಶೋತ್ಸವ ಅಂತರರಾಷ್ಟ್ರೀಯ ಮಟ್ಟದಲ್ಲಿ ಗುರುತಿಸಿಕೊಳ್ಳಲಿ–ಭೂಷಣ್ ಬೋರಸ

ಹುಬ್ಬಳ್ಳಿ : ಹುಬ್ಬಳ್ಳಿ–ಧಾರವಾಡ ಅವಳಿ ನಗರದ ಗಣೇಶೋತ್ಸವವು ಅತ್ಯಂತ ವಿಶಿಷ್ಟವಾದದ್ದಾಗಿದ್ದು, ಈ ಹಬ್ಬವು ಕೇವಲ ಸ್ಥಳೀಯ ಆಚರಣೆಯಾಗದೆ ಅಂತರರಾಷ್ಟ್ರೀಯ ಮಟ್ಟದಲ್ಲಿ ಗುರುತಿಸಿಕೊಳ್ಳಬೇಕು ಎಂಬುದು ನನ್ನ ಕನಸಾಗಿದೆ ಎಂದು ಪೊಲೀಸ್ ಆಯುಕ್ತ ಭೂಷಣ್ ಬೋರಸೆ ತಿಳಿಸಿದರು. ಸಭೆಯ



ಆರಂಭದಲ್ಲಿ ತಮ್ಮ ಭಾವನೆಗಳನ್ನು ಹಂಚಿಕೊಂಡ ಅವರು, "ಮಹಾರಾಷ್ಟ್ರ ನನ್ನ ಜನ್ಮಭೂಮಿಯಾಗಿದ್ದರೆ, ಕರ್ನಾಟಕ ನನ್ನ ಕರ್ಮಭೂಮಿಯಾಗಿದೆ. ಹಿಂದೆ ಬೆಳಗಾವಿಯಲ್ಲಿ ನನಗೆ ಸಾರ್ವಜನಿಕರಿಂದ ಸಿಕ್ಕ ಪ್ರೀತಿ ಮತ್ತು ಸಹಕಾರ ಇಲ್ಲೂ ಸಿಗುತ್ತದೆ ಎಂಬ ಬಲವಾದ ನಂಬಿಕೆ ನನಗಿದೆ" ಎಂದರು.


## ವಂದೇ ಮಾತರಂಗೆ ಗೌರವ ಸಲ್ಲಿಕೆ : ಕಾಂಗ್ರೆಸ್ ಆಕ್ಷೇಪ

ಶ್ರೀನಗರ : ಜಮ್ಮು ಮತ್ತು ಕಾಶ್ಮೀರದ ಮುಖ್ಯಮಂತ್ರಿ ಒಮರ್ ಅಬ್ದುಲ್ಲಾ ಹಾಗೂ ನ್ಯಾಷನಲ್ ಕಾನ್ಫರೆನ್ಸ್ (ಎನ್‌ಸಿ) ಅಧ್ಯಕ್ಷ ಫಾರೂಕ್ ಅಬ್ದುಲ್ಲಾ ಅವರು ರಾಷ್ಟ್ರಗೀತೆ 'ವಂದೇ ಮಾತರಂ'ನ ಸಂಪೂರ್ಣ ಆವೃತ್ತಿಯ ಗಾಯನದ ವೇಳೆ ಎದ್ದುನಿಂತು ಗೌರವ ಸಲ್ಲಿಸಿರುವುದು ರಾಜಕೀಯ ವಲಯದಲ್ಲಿ ಹೊಸ ಚರ್ಚೆಗೆ ಕಾರಣವಾಗಿದೆ. ನ್ಯಾಷನಲ್ ಕಾನ್ಫರೆನ್ಸ್ ನಾಯಕರ ಈ ನಡೆಯನ್ನು ಕಾಂಗ್ರೆಸ್ ಬಹಿರಂಗವಾಗಿ ಪ್ರಶ್ನಿಸಿದ್ದು, ದೇಶದ ಸ್ವಾತಂತ್ರ್ಯ ಹೋರಾಟಗಾರರು ಕೈಗೊಂಡಿದ್ದ ನಿರ್ಧಾರವನ್ನು ಮೈತ್ರಿಕೂಟದ ನಿರ್ಧಾರಗಳು ಗೌರವಿಸಬೇಕು ಎಂದು ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಕೆ.ಸಿ. ವೇಣುಗೋಪಾಲ್‌ಮನವಿ ಮಾಡಿದ್ದಾರೆ.



## ಅಯೋಧ್ಯೆ ರಾಮಮಂದಿರ ಸಿಬ್ಬಂದಿಗೆ ಶೀಘ್ರದಲ್ಲೇ ಹೊಸ ವಸ್ತ್ರಸಂಹಿತೆ !

ಅಯೋಧ್ಯೆ : ಅಯೋಧ್ಯೆಯ ರಾಮ ಮಂದಿರದಲ್ಲಿ ನಡೆದ ದೇಣಿಗೆ ಕಳ್ಳತನ ಪ್ರಕರಣದ ಬಳಿಕ ಎಚ್ಚೆತ್ತುಕೊಂಡಿರುವ ಶ್ರೀ ರಾಮ ಜನ್ಮಭೂಮಿ ತೀರ್ಥ ಕ್ಷೇತ್ರ ಟ್ರಸ್ಟ್, ದೇವಾಲಯದ ಆಡಳಿತ ಮತ್ತು ಸಿಬ್ಬಂದಿಯಲ್ಲಿ ಶಿಸ್ತು ಹೆಚ್ಚಿಸಲು ಹೊಸ ನೀತಿಯನ್ನು ಜಾರಿಗೆ ತರಲು ಮುಂದಾಗಿದೆ. ಈಗಾಗಲೇ ದೇಗುಲದ ಪ್ರಥಮ ಮುಖ್ಯ



ಕಾರ್ಯನಿರ್ವಾಹಕ ಅಧಿಕಾರಿಯಾಗಿ (ಸಿಇಒ) ಜಿತೇಂದ್ರ ಮಿಶ್ರಾ ಅವರನ್ನು ಆಯ್ಕೆ ಮಾಡಲಾಗಿದ್ದು, ಮಂದಿರದ ಕೆಲಸ ಕಾರ್ಯಗಳನ್ನು ಹೆಚ್ಚು ಸಂಘಟಿತ ಹಾಗೂ ಶಿಸ್ತುಬದ್ಧಗೊಳಿಸಲು ಹೊಸ ನಿಯಮಾವಳಿಗಳನ್ನು ರೂಪಿಸಲಾಗುತ್ತಿದೆ. ಸಿಬ್ಬಂದಿಗೆ ನಿರ್ದಿಷ್ಟ ವಸ್ತ್ರಸಂಹಿತೆ ಜಾರಿಗೊಳಿಸುವುದು ಪ್ರಮುಖ ಯೋಜನೆಯಾಗಿದೆ.


## ವಡೋದರಾದಲ್ಲಿ 35,000 ಕೋಟಿ ವೆಚ್ಚದ ಯೋಜನೆಗಳಿಗೆ ಪ್ರಧಾನಿ ಚಾಲನೆ



ವಡೋದರ : ಗುಜರಾತ್‌ನ ವಡೋದರಾದಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು 35,000 ಕೋಟಿ ರೂಪಾಯಿಗಳಿಗೂ ಹೆಚ್ಚು ಮೌಲ್ಯದ ಮೂಲಸೌಕರ್ಯ ಮತ್ತು ಅಭಿವೃದ್ಧಿ ಯೋಜನೆಗಳಿಗೆ ಉದ್ಘಾಟನೆ ಹಾಗೂ ಶಂಕುಸ್ಥಾಪನೆ ನೆರವೇರಿಸಿದರು. ಈ ಬೃಹತ್ ಕೊಡುಗೆಯಲ್ಲಿ ಪೂರ್ಣಗೊಂಡಿರುವ 2,800 ಕಿಲೋಮೀಟರ್‌ಗೂ ಹೆಚ್ಚು ಉದ್ದದ ಪಶ್ಚಿಮ ಮೀಸಲು ಸರಕು ಸಾಗಣೆ ಕಾರಿಡಾರ್ (WDFC) ಯೋಜನೆಯು ಪ್ರಮುಖವಾಗಿದ್ದು, ಇದು ಸರಕು ಸಾಗಣೆ ಸಂಪರ್ಕವನ್ನು ಮತ್ತಷ್ಟು ಬಲಪಡಿಸಲಿದೆ. ಇದರಿಂದ ಸಾರಿಗೆಯ ಪ್ರಯಾಣ ಸಮಯ ಹಾಗೂ ಲಾಜಿಸ್ಟಿಕ್ಸ್ ವೆಚ್ಚ ಗಣನೀಯವಾಗಿ ಕಡಿಮೆಯಾಗಲಿದೆ.

## ದಕ್ಷಿಣದತ್ತ ಮುಖ ಮಾಡಿದ ಮಾನ್ಸೂನ್: ಭಾರಿ ಮಳೆ ಮುನ್ಸೂಚನೆ

ನವದೆಹಲಿ : ಇನ್ಸಾಟ್ 3ಡಿಎಸ್ ಉಪಗ್ರಹವು ರವಾನಿಸಿರುವ ಇತ್ತೀಚಿನ ಹವಾಮಾನ ಚಿತ್ರಗಳು ದಕ್ಷಿಣ ಭಾರತದ ರೈತರಲ್ಲಿ ಹೊಸ ಭರವಸೆ ಮೂಡಿಸಿವೆ. ಪ್ರಸ್ತುತ ನೈರುತ್ಯ ಮಾನ್ಸೂನ್ ಮಾರುತಗಳು ದೇಶದ ಮಧ್ಯ ಮತ್ತು ಪೂರ್ವ ಭಾರತದ ಬಯಲು ಪ್ರದೇಶಗಳಲ್ಲಿ ಹೆಚ್ಚಿನ ಪ್ರಭಾವ ಹೊಂದಿದ್ದರೂ, ಮೋಡಗಳ ಸಾಲುಗಳು ಈಗ ದಕ್ಷಿಣದ ಕಡೆಗೆ



ಧಾವಿಸುತ್ತಿರುವ ಸುಳಿವು ಸಿಕ್ಕಿದೆ. ಇದರಿಂದ ಮುಂಬರುವ ದಿನಗಳಲ್ಲಿ ದಕ್ಷಿಣ ಭಾರತದಾದ್ಯಂತ ಉತ್ತಮ ಮಳೆಯಾಗುವ ಸಾಧ್ಯತೆ ದಟ್ಟವಾಗಿದೆ. ಉಪಗ್ರಹ ಚಿತ್ರಗಳ ಪ್ರಕಾರ ಹಿಮಾಲಯ, ಇಂಡೋ–ಗಂಗಾ ಬಯಲು ಸೀಮೆ ಮತ್ತು ಮಧ್ಯ ಭಾರತದ ಮೇಲೆ ದಟ್ಟವಾದ ಮೋಡಗಳ ಸಾಲು ಗೋಚರಿಸಿದೆ.

## ಅಬೂಬಕ್ಕರ್ ಮುಸ್ಲಿಯಾರ್ ಬೆಂಬಲಕ್ಕೆ ಶಾಸಕಿ ಫಾತಿಮಾ ತಹ್ಲಿಯಾ

ತಿರುವನಂತಪುರ: ಕೇರಳದ ಪ್ರಮುಖ ಇಸ್ಲಾಮಿಕ್ ವಿದ್ವಾಂಸ ಹಾಗೂ ಸಮಸ್ತ ಕೇರಳ ಜಮಿಯುತ್ತುಲ್ ಉಲಮಾದ ಪ್ರಧಾನ ಕಾರ್ಯದರ್ಶಿ ಎ.ಪಿ. ಅಬೂಬಕ್ಕರ್ ಮುಸ್ಲಿಯಾರ್ ಅವರು ಮಹಿಳೆಯರ ಸಾರ್ವಜನಿಕ ಪ್ರವೇಶ ಹಾಗೂ ಸ್ವಾತಂತ್ರ್ಯದ ಕುರಿತು ನೀಡಿದ ಹೇಳಿಕೆಯು ರಾಜ್ಯದ ರಾಜಕೀಯ ಮತ್ತು ಸಾಮಾಜಿಕ ಅಂಗಳದಲ್ಲಿ ತೀವ್ರ ವಿವಾದಕ್ಕೆ ಗ್ರಾಸವಾಗಿದೆ. ಈ ಸಾಲಿನಲ್ಲಿ ಇಂಡಿಯನ್ ಯೂನಿಯನ್ ಮುಸ್ಲಿಂ ಲೀಗ್ ಶಾಸಕಿ ಫಾತಿಮಾ ತಹ್ಲಿಯಾ ಎ. ಪಿ. ಅಬ್ದುಲ್ ಮುಸ್ಲಿಯಾರ್‌ಗೆ ಬೆಂಬಲ ಸೂಚಿಸಿದ್ದಾರೆ. ತಾವು ಎಂದಿಗೂ ಮಹಿಳಾ ಸಬಲೀಕರಣದ ಪರವಾಗಿಯೇ ಧ್ವನಿ ಎತ್ತುತ್ತಾ ಬಂದಿದ್ದು, ಆ ನಿಲುವಿನಲ್ಲಿ ಯಾವುದೇ ಬದಲಾವಣೆ ಇಲ್ಲ ಎಂದು ತಿಳಿಸಿದ್ದಾರೆ.



ಕರಾವಳಿ ತರಂಗಿಣಿ

# ಸಿನಿ ತರಂಗಿಣಿ



## 'ಅಣ್ಣ ಫ್ರಮ್ ಮೆಕ್ಸಿಕೋ' 'ಪುಟ್ಟಮಲ್ಲಿ' ಹಿಟ್..



ಸ್ಯಾಂಡಲ್‌ವುಡ್‌ನ ಜನಪ್ರಿಯ ನಟ 'ಡಾಲಿ' ಧನಂಜಯ ಅಭಿನಯದ ಬಹು ನಿರೀಕ್ಷಿತ 'ಅಣ್ಣ ಫ್ರಮ್ ಮೆಕ್ಸಿಕೋ' ಚಿತ್ರದ ನೂತನ 'ಪುಟ್ಟಮಲ್ಲಿ' ಹಾಡು ಸಾಮಾಜಿಕ ಜಾಲತಾಣಗಳಲ್ಲಿ ಭರ್ಜರಿ ಸದ್ದು ಮಾಡುತ್ತಿದೆ. ಯೂಟ್ಯೂಬ್ ಚಾನೆಲ್‌ನಲ್ಲಿ ಬಿಡುಗಡೆಯಾಗಿರುವ ಈ ಹಾಡು ಸದ್ಯ ನೆಟ್ಟಿಗರ ಮೆಚ್ಚುಗೆಗೆ ಪಾತ್ರವಾಗಿದ್ದು, ಸೋಷಿಯಲ್ ಮೀಡಿಯಾದಲ್ಲಿ ಹವಾ ಮಾಡುತ್ತಿದೆ. ವಾಸೂಕಿ ವೈಭವ್ ಸಂಗೀತ ನಿರ್ದೇಶನದಲ್ಲಿ ಮೂಡಿ ಬಂದಿರುವ ಈ ಸುಮಧುರ ಹಾಡಿಗೆ ಚೇತನ್ ಕುಮಾರ್ ಸಾಹಿತ್ಯ ಬರೆದಿದ್ದು, ಖ್ಯಾತ ಗಾಯಕ ಸಂಜಿತ್ ಹೆಗ್ಡೆ ಕಂಠಸಿರಿಯಲ್ಲಿ ಹಾಡು ಅತ್ಯಂತ ಆಕರ್ಷಕವಾಗಿ ಹೊರಹೊಮ್ಮಿದೆ. ಕೇಳುಗರನ್ನು ತಕ್ಷಣವೇ ಗುಂಗಿಗೆ ಕೆಡವುವ ಈ ಟ್ರ್ಯಾಕ್‌ಗೆ ಅಭಿಮಾನಿಗಳು ಥ್ರಿಲ್ ಆಗಿದ್ದಾರೆ. ಈ ಗೀತೆಯು ಚಿತ್ರಕ್ಕೆ ದೊಡ್ಡ ಮಟ್ಟದ ಮೈಲೇಜ್ ತಂದುಕೊಟ್ಟಿದೆ.

## 'ಪಿಕಾಸೊ' ಫಸ್ಟ್ ಲುಕ್ ರಿಷಬ್ ಶೆಟ್ಟಿ ರಿಲೀಸ್



ಕನ್ನಡ ಚಿತ್ರರಂಗದ ಸೂಪರ್‌ಸ್ಟಾರ್ ಡಾ. ಶಿವರಾಜ್‌ಕುಮಾರ್ ಮತ್ತು ಯೂಥ್ ಸೆನ್ಸೇಷನ್ ಅಭಿಶನ್ ಜೀವಿಂತ್ ಕಾಂಬಿನೇಷನ್‌ನ ಸಿನಿಮಾದ ಶೀರ್ಷಿಕೆ ಹಾಗೂ ಫಸ್ಟ್ ಲುಕ್ ಅಧಿಕೃತವಾಗಿ ಬಿಡುಗಡೆಯಾಗಿದ್ದು, ಚಿತ್ರಕ್ಕೆ 'ಪಿಕಾಸೊ' ಎಂದು ಹೆಸರಿಡಲಾಗಿದೆ. ನಟ–ನಿರ್ದೇಶಕ ರಿಷಬ್ ಶೆಟ್ಟಿ ಈ ಚಿತ್ರದ ಫಸ್ಟ್ ಲುಕ್ ಪೋಸ್ಟರ್ ಅನ್ನು ಅನಾವರಣಗೊಳಿಸಿದರು. 'ಡ್ರಾಮಾ ಕಂಪನಿ' ಅರ್ಪಿಸುವ ಈ ಚಿತ್ರದ ಮೂಲಕ ಶಿವರಾಜ್‌ಕುಮಾರ್ ಅವರ ಗಂಭೀರ ಸ್ಕ್ರೀನ್ ಪ್ರೆಸೆನ್ಸ್ ಹಾಗೂ ಹೊಸ ತಲೆಮಾರಿನ ನಟ ಅಭಿಶನ್ ಅವರ ಉತ್ಸಾಹ ಒಂದಾಗುತ್ತಿದ್ದು, ಗೌತಮ್ ಶಿವರಾಮನ್ ನಿರ್ದೇಶಕರಾಗಿ ಪಾದಾರ್ಪಣೆ ಮಾಡುತ್ತಿದ್ದಾರೆ. ಬಿಡುಗಡೆಯಾಗಿರುವ ಫಸ್ಟ್ ಲುಕ್ ಪೋಸ್ಟರ್ ವಿಭಿನ್ನ ದೃಶ್ಯ ಶೈಲಿಯಿಂದಲೇ ಗಮನ ಸೆಳೆಯುತ್ತದೆ. ಅವರಿಬ್ಬರ ಭಂಗಿ ಪ್ರೇಕ್ಷಕರ ಕುತೂಹಲ ಕೆರಳಿಸಿದೆ.

## ಗಣೇಶನ ಹಬ್ಬಕ್ಕೆ 'ರೋಲೆಕ್ಸ್' ಲಿರಿಕಲ್ ವಿಡಿಯೋ


ಮಧು ಫಿಲಂ ಸುರ್ಕ್ಯುಯಿಟ್ಸ್ ಸಂಸ್ಥೆ ಲಾಂಛನದಡಿಯಲ್ಲಿ ಅಂಬಟಿ ಮಧು ಮೋಹನ್ ನಿರ್ಮಿಸಿರುವ, ಶ್ರೀನಿವಾಸ್ ಮಂಡ್ಯ ನಿರ್ದೇಶಿಸಿರುವ, ಕೋಮಲ್ ಕುಮಾರ್ ನಾಯಕರಾಗಿ ನಟಿಸಿರುವ, ಸೋನಾಲ್ ಮೊಂತೆರೊ ನಾಯಕಿಯಾಗಿ ಹಾಗೂ ವಿನೋದ್ ಪ್ರಭಾಕರ್ ವಿಶೇಷ ಪಾತ್ರದಲ್ಲಿ ಅಭಿನಯಿಸಿರುವ "ರೋಲೆಕ್ಸ್" ಚಿತ್ರದ ಟೀಸರ್ ಇತ್ತೀಚೆಗೆ ಬಿಡುಗಡೆಯಾಗಿ, ನಿರೀಕ್ಷೆಗೂ ಮೀರಿ ಮೆಚ್ಚುಗೆ ವ್ಯಕ್ತವಾಗಿದೆ. ಈ ಸಂದರ್ಭದಲ್ಲಿ ಚಿತ್ರತಂಡದಿಂದ ಮತ್ತೊಂದು ಸುದ್ದಿ ಹೊರಬಂದಿದೆ. ಸೆಪ್ಟೆಂಬರ್ 14 ರಂದು ಗಣೇಶನ ಹಬ್ಬ. ಈ ಶುಭದಿನದಂದು "ರೋಲೆಕ್ಸ್" ಚಿತ್ರದ ಸುಮಧುರ ಹಾಡಿನ ಲಿರಿಕಲ್ ವಿಡಿಯೋ ಬಿಡುಗಡೆಯಾಗಲಿದೆ. ರಾಕೇಶ್ ಸಿ ತಿಲಕ್ ಛಾಯಾಗ್ರಹಣ, ಅರವಿಂದ್ ರಾಜ್ ಸಂಕಲನ, ರಾಜೇಶ್ ವರ್ಮ ಕ್ರಿಯೇಟಿವ್ ಹೆಡ್, ಮುರಳಿಕೃಷ್ಣ ಕಾರ್ಯಕಾರಿ ನಿರ್ಮಾಪಕರಾಗಿದ್ದಾರೆ.



## "ಸರ್ವೇ ಜನಾಃ ಸುಖಿನೋ ಭವಂತು"

ಎಸ್.ವಿ. ನಾರಾಯಣ್ ಹಾಗೂ ಎಸ್ ವಿ ಕೃಷ್ಣಮೂರ್ತಿ ನಿರ್ಮಿಸುತ್ತಿರುವ, ಸುನೀಲ್ ರುದ್ರಪ್ರಭಾ ನಿರ್ದೇಶನದ ಹಾಗೂ ಮನೋರಂಜನ್ ರವಿಚಂದ್ರನ್ ನಾಯಕನಾಗಿ ನಟಿಸಿರುವ "ಸರ್ವೇ ಜನಾಃ ಸುಖಿನೋ ಭವಂತು" ಚಿತ್ರದ ನಾಯಕಿಯಾಗಿ ಬಹುಭಾಷಾ ನಟಿ ಅಪರ್ಣ ದಾಸ್ ಅಭಿನಯಿಸಿದ್ದಾರೆ. ಪೃಥ್ವಿ ಅಂಬರ್ ಖಳನಟನಾಗಿ ಕಾಣಿಸಿಕೊಂಡಿದ್ದಾರೆ. ನಾಯಕಿ ಅಪರ್ಣ ದಾಸ್ ಮೂಲತಃ ಕೇರಳದ ಪಾಲ್‌ಕ್ಕಾಡ್‌ನವರು. ತಮಿಳು ಚಿತ್ರದಲ್ಲಿ ನಟಿಸಿರುವ ಅಪರ್ಣ ದಾಸ್, ಈ ಚಿತ್ರದ ಮೂಲಕ ಕನ್ನಡ ಚಿತ್ರರಂಗಕ್ಕೆ ಪದಾರ್ಪಣೆ ಮಾಡುತ್ತಿದ್ದಾರೆ. ಈ ಹಿಂದೆ "ಅಟೆಂಪ್ಟ್ ಟು ಮರ್ಡರ್", " ರಂಗನಾಯಕಿ" ಚಿತ್ರ ಗಳನ್ನು ನಿರ್ಮಿಸಿದ್ದ ಎಸ್ ವಿ ಎಂಟರ್ಟೈನ್ಮೆಂಟ್ ಸಂಸ್ಥೆಯ ನಿರ್ಮಾಣದ ನಾಲ್ಕನೇ ಚಿತ್ರವಿದು. ಸುನೀಲ್ ರುದ್ರಪ್ರಭ ಅವರಿಗೆ ಇದು ಮೊದಲ ನಿರ್ದೇಶನದ ಚಿತ್ರ.








KARAVALI THARANGINI Weekly Owned, Editor, Published & Printed by Lalithasri Preetham Rai No.2-64/54(12), Pushparaj Nilaya, Jayanagara, 3rd 'A' Maroli Village, Dakshina Kannada, Karnataka - 575005.
email: karavalitharangini@gmail.com, web: karavalitharangini.com ph: 9880109212 Printed at Bhima Samskruthi Printers & Publishers, No 1182 14th Main Road Prakash Nagar, Bengaluru Karnataka-560021